ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 56 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಚಿತ್ರದುರ್ಗ | ದಿನಾಂಕ: 12–09–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 56 | RNI No: KARKAN/2023/88462 | Chitradurga | Date: 12-09-2024 Thursday | Page: 4 | Price: Rs. 2-00

ಒಳಪುಟದ ಸುದ್ದಿಗಳು
ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸೆ.17ರಂದು ವಿಶ್ವಕರ್ಮ ಜಯಂತಿ 2
ನಕಲಿ ವೈದ್ಯರಿಗೆ ತಲಾ ಲಕ್ಷ ರೂ.ಗಳ ದಂಡ, ಮೆಡಿಕಲ್ ಸ್ಟೋರ್ ಮುಚ್ಚಲು ಆದೇಶ 3
ಕ್ಲೋರಿನ್ ಅನಿಲ ಸೋರಿಕೆ ಯಥಾಸ್ಥಿತಿಯತ್ತ ಹೊಸದುರ್ಗ 4

ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ನೇಮಕ



» **ನಮ್ಮಜನ ಸಮಾಚಾರ, ಚಿತ್ರದುರ್ಗ**

ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015, ತಿದ್ದುಪಡಿ ಕಾಯ್ದೆ 2021 ಹಾಗೂ ಬಾಲ ನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಮಾದರಿ ನಿಯಮಗಳು 2016, ತಿದ್ದುಪಡಿ ಮಾದರಿ ನಿಯಮಗಳು 2022 ರನ್ವಯ ಈ ಕೆಳಕಂಡ ಜಿಲ್ಲೆಗಳ ಮಕ್ಕಳ ಕಲ್ಯಾಣ ಸಮಿತಿಗಳಿಗೆ ಅಧ್ಯಕ್ಷರು ಮತ್ತು ಸದಸ್ಯರನ್ನು 03 ವರ್ಷಗಳ ಅವಧಿಗೆ ನೇಮಕಾತಿ ಮಾಡಲಾಗಿದೆ.

ಇದರಲ್ಲಿ ಚಿತ್ರದುರ್ಗ ಜಿಲ್ಲೆಗೆ 03 ವರ್ಷದ ಅವಧಿಗೆ ಅಧ್ಯಕ್ಷರು ಮತ್ತು ಸದಸ್ಯರನ್ನು ಆಯ್ಕೆ ಮಾಡಲಾಗಿದೆ.

**ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ:** ಶೀಲಾ .ಪಿ ನೆಹರು ನಗರ 3ನೇ ಅಡ್ಡರಸ್ತೆ, ಹೊಳಲ್ಕೆರೆ ರಸ್ತೆ 22 ಚಿತ್ರದುರ್ಗ, ಮಕ್ಕಳ ಕಲ್ಯಾಣ ಸಮಿತಿ ನಾಲ್ಕು ಜನ ಸದಸ್ಯರು ವಿವರ,ಬಿ.ಎಂ ಅನಿಲ್ ಕುಮಾರ್ ಬಿ.ಎಂ. ಅನಿಲ್‌ಕುಮಾರ, ನಂ.266, 6ನೇ ಮುಖ್ಯ ರಸ್ತೆ, 2ನೇ ಹಂತ, ದಾವಲಗಿರಿ ಲೇಔಟ್, ಪೆಟ್ರೋಲ್ ಬಂಕ್ , –577501. ಕೆ. ವಿ ರಂಗನಾಥ ಕೆ.ವಿ.ರಂಗನಾಥ, #4ನೇ ಕ್ರಾಸ್, ಪುಣ್ಯ ನಿಲಯ ಹುಳಿಯಾರ್ ರಸ್ತೆ, ಲಕ್ಷ್ಮೀ ಲೇಔಟ್ ಹಿರಿಯೂರು(ತಾ) ಚಿತ್ರದುರ್ಗ ಜಿಲ್ಲೆ – 577598. ಪುಷ್ಪಾ ಎಸ್‌ಡಿ, (ಕೆಂಬ್ಳಿ) ಪುಷ್ಪಾ ಎಸ್‌ಡಿ, (ಕೆಂಬ್ಳಿ) ಚೇತನ ನಿಲಯ, ನಂ – 10 ದಾವಲಗಿರಿ ಬಡಾವಣೆ, ಚಿತ್ರದುರ್ಗ–577501. ಜಗದೀಶ .ಜಿ ಜಗದೀಶ್ ಜಿ /ಂ ಎನ್ ಗುರುಸಿದ್ದಪ್ಪ, ಕಾಟೇಹಳ್ಳಿ, ಸಿದ್ಧಾಪುರ ಪೋಸ್ಟ್, ಚಿತ್ರದುರ್ಗ– –577520.

### ಸೆ.18 ರಂದು ಡಿ.ಎಲ್. ಆರ್.ಸಿ ಸಭೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯಿತಿ ಮಿನಿ ಸಭಾಂಗಣದಲ್ಲಿ ಇದೇ ಸೆ.18 ರಂದು ಬೆಳಿಗ್ಗೆ 11 ಗಂಟಗೆ ಜಿ.ಪಂ ಸಿಇಓ ಎಸ್.ಜೆ.ಸೋಮಶೇಖರ್ ಅಧ್ಯಕ್ಷ□□ತೆಯಲ್ಲಿ ಲೀಡ್ ಬ್ಯಾಂಕ್‌ಗೆ ಸಂಬಂಧಿಸಿದಂತೆ ಡಿ.ಎಲ್.ಆರ್.ಸಿ (ಜಿಲ್ಲಾ ಮಟ್ಟದ ಸಲಹಾ ಮತ್ತು ಪರಿಶೀಲನಾ) ಮತ್ತು ಡಿ.ಸಿ.ಸಿ ಸಭೆ ನಡೆಯಲಿದೆ. ವಿಶೇಷ ಆಹ್ವಾನಿತರಾಗಿ ಸಂಸದ ಗೋವಿಂದ ಎಂ ಕಾರಜೋಳ ಭಾಗವಹಿಸುವರು. ಈ ಸಭೆಗೆ ಸಮಿತಿ ಸದಸ್ಯರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು, ಬ್ಯಾಂಕ್ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಭಾಗವಹಿಸುವಂತೆ ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿವಿಧ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಿಂದ ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ ವರ್ಷದ ಬಿ.ಎ, ಬಿ.ಕಾಂ., ಬಿ.ಎಸ್‌ಸ್ಸಿ., ಬಿ.ಲಿಬ್,ಐಎಸ್‌ಸ್ಸಿ., ಬಿ.ಸಿ.ಎ., ಬಿ.ಬಿ.ಎ., ಬಿಎಸ್‌ಡಬ್ಲ್ಯು., ಎಂ.ಎ., ಎಂ.ಕಾಂ., ಎಂ.ಎ.,ಎಂ.ಸಿ.ಜೆ., ಎಂ.ಲಿಬ್,ಐಎಸ್‌ಸಿ., ಎಂ.ಬಿ.ಎ., ಎಂ.ಎಸ್ಸಿ., ಎಂ.ಸಿ.ಎ., ಎಂ.ಎಸ್‌ಡಬ್ಲ್ಯು., ಪಿಜಿ ಡಿಪ್ಲೋಮಾ., ಡಿಪ್ಲೋಮಾ ಹಾಗೂ ಸರ್ಟಿಫಿಕೇಟ್ ಕೋರ್ಸಗಳಿಗೆ ಪ್ರವೇಶಾತಿ ಪ್ರಕ್ರಿಯೆಯು ಪ್ರಾರಂಭವಾಗಿದೆ. ಬಿಪಿಎಲ್ ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿನಿಯರಿಗೆ, ಡಿಫೆನ್ಸ್ , ಮಾಜಿ ಸೈನಿಕ ವಿದ್ಯಾರ್ಥಿಗಳಿಗೆ, ಆಟೋ, ಕ್ಯಾಬ್ ಚಾಲಕರು ಮತ್ತು ಅವರ ಮಕ್ಕಳಿಗೆ ಬೋಧನಾ ಶುಲ್ಕದಲ್ಲಿ ಶೇ.10ರಷ್ಟು ರಿಯಾಯಿತಿ ನೀಡಲಾಗುವುದು. ಅಲ್ಲದೇ ಕೋವಿಡ್–19 ನಿಂದ ಮೃತಪಟ್ಟವರ ಮಕ್ಕಳಿಗೆ, ತೃತೀಯ ಲಿಂಗಿಗಳಿಗೆ, ದೃಷ್ಟಿಹೀನ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ. ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಎಲ್ಲಾ ರಜಾದಿನಗಳಂದು ಸಹ ಕಚೇರಿ ಎಂದಿನಂತೆ ಕಾರ್ಯನಿರ್ವಹಿಸುತ್ತದೆ. ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್‌ಸೈಟ್ www.ksoumysuru.ac.in ವೀಕ್ಷಿಸುವುದು ಅಥವಾ ಮೊ.ನಂ. 8310676181, 9902517906, 9916009318, 8095939359 ಕರೆ ಮಾಡುವುದು ಅಥವಾ ಖುದ್ದಾಗಿ ಕಚೇರಿಯನ್ನು ಸಂಪರ್ಕಿಸಿ.

# ಭದ್ರಾಗೆ ಕೇಂದ್ರದಿಂದ ಅನುದಾನ ದ್ರೋಹ

» **ಚಿತ್ರದುರ್ಗ**

ಭದ್ರಾ ಮೇಲ್ದಂಡೆಗೆ ಅನುದಾನ ನೀಡದೆ ಕೇಂದ್ರ ಸರ್ಕಾರ ದ್ರೋಹದ ಮಾರ್ಗಗಳ ಅನುಸರಿಸುತ್ತಿದೆ ಎಂದು ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಆರೋಪಿಸಿದೆ.

ಇಲ್ಲಿನ ಪತ್ರಕರ್ತರ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಮಿತಿ ಪದಾಧಿಕಾರಿಗಳು ಸೆಪ್ಟಂಬರ್ 5 ರಂದು □□□ಂದ್ರ ಜಲಶಕ್ತಿ ಸಚಿವಾಲಯದ ಕಾರ್ಯದರ್ಶಿ ದೇಬರ್ಶಿ ಮುಖರ್ಜಿ ರಾಜ್ಯ ಸರ್ಕಾರಕ್ಕೆ ಬರೆದಿರುವ ಪತ್ರಕ್ಕೆ ತೀವ್ರ ಆಕ್ಷೇಪಣೆ ವ್ಯಕ್ತಪಡಿಸಿದರು. ಯೋಜನೆಗೆ ಕೇಂದ್ರ ಸರ್ಕಾರವೇ ಎಲ್ಲ ತಾಂತ್ರಿಕ ಪ್ರಸ್ತಾವನೆಗೆ ಅನುಮೋದನೆ ನೀಡಿದ್ದು ಹಣ ಬಿಡುಗಡೆ ವೇಳೆಗೆ ಖ್ಯಾತೆ ತೆಗೆಯುವುದು ಎಷ್ಟರ ಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು.

ಭದ್ರಾ ಮೇಲ್ದಂಡೆಗೆ ರಾಜ್ಯ ಸರ್ಕಾರ ಈವರೆಗೆ ಮಾಡಿದ ಖರ್ಚು ವೆಚ್ಚ, ಯೋಜನೆ ಪೂರ್ಣಗೊಳಿಸಲುಬೇಕಾದ ಬಾಕಿ ಮೊತ್ತದ ಆಧಾರದ ಮೇಲೆ ಕೇಂದ್ರ ನೆರವು ನೀಡುತ್ತದೆ. ಭೌಗೋಳಿಕ ಹಂಚಿಕೆ ಹಾಗೂ ಹಣಕಾಸು ಲಭ್ಯತೆ ನೋಡಿಕೊಳ್ಳಬೇಕಾಗುತ್ತದೆ ಎಂಬ ಅಂಶವ ದೇಬರ್ಶಿ ಮುಖರ್ಜಿ ತಮ್ಮ ಪತ್ರದಲ್ಲಿ ಸ್ಪಷ್ಟಪಡಿಸಿದ್ದಾರೆ. ಈ ಪತ್ರ ಬರೆಯುವಾಗ ವಿವೇಚನಾ ರಹಿತವಾಗಿ ನಡೆದುಕೊಳ್ಳಲಾಗಿದೆ. ಅನುದಾನ ನೆರವು ನೀಡುವುದ ಮತ್ತೊಂದಿಷ್ಟು ದಿನ ಮುಂದಕ್ಕೆ ಹಾಕುವ ಉದ್ದೇಶ ಇದರ ಹಿಂದೆ ಅಡಗಿದೆ ಎಂದು ಸಮಿತಿ ದೂರಿದೆ.

ಐದು ಹಂತದ ಸಮಿತಿಗಳ ಮುಂದೆ ಭದ್ರಾ ಮೇಲ್ದಂಡೆ ಪ್ರಸ್ತಾವನೆ ಹೋಗಿ ಅಂತಿಮವಾಗಿ ಅನುಮೋದನೆಗೊಂಡಿದೆ. ರಾಜ್ಯ ಸರ್ಕಾರದಿಂದ ಯಾವುದೇ ತಾಂತ್ರಿಕ



ಮಾಹಿತಿ ಪೂರೈಕೆ ಅಗತ್ಯವಿಲ್ಲ. ಹಿಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಜಲಸಂಪನ್ಮೂಲ ಸಚಿವ ಗೋವಿಂದ ಕಾರಜೋಳ ಖುದ್ದು ಆಸಕ್ತಿ ವಹಿಸಿ, ಎಲ್ಲ ತಾಂತ್ರಿಕ ಅಡಚಣೆಗಳ ನಿವಾರಿಸಿ ಭದ್ರಾ ಮೇಲ್ದಂಡೆ ಯೋಜನೆ ಪ್ರಸ್ತಾವನೆಯ ಕೇಂದ್ರದ ಮುಂದೆ ಮಂಡಿಸಿದ್ದರು.24–12–2020 ರಂದು ನಡೆದ ಜಲಶಕ್ತಿ ಸಚಿವಾಲಯದ 147 ನೇ ಮೀಟಿಂಗ್ ನಲ್ಲಿ ಸಲಹಾ ಸಮಿತಿ ಯೋಜನೆ ಸ್ವೀಕಾರ ಮಾಡಿತ್ತು. 25–3–2021 ರಂದು ನಡೆದ ಇನ್ ವೆಸ್ಟ್ ಮೆಂಟ್ ಕ್ಲಿಯರೆನ್ಸ್ ಸಮಿತಿ 16,125 ಕೋಟಿ ರುಪಾಯಿ ವೆಚ್ಚದ ಯೋಜನೆಗೆ ಒಪ್ಪಿಗೆ ಸೂಚಿಸಿತು. 17–4–2021 ರಂದ ನಡೆದ ಮತ್ತೊಂದು ಸಭೆಯಲ್ಲಿ ಭದ್ರಾ ಮೇಲ್ದಂಡೆ ರಾಷ್ಟ್ರೀಯ ಯೋಜನೆಯಾಗುವ ಎಲ್ಲ ಅರ್ಹತೆ ಇರುವುದ ದೃಢೀಕರಿಸಲಾಗಿತ್ತು.

15–2–2022 ರಂದು ನಡೆದ ಹೈ ಪವರ್ ಸ್ಟೀರಿಂಗ್ ಕಮಿಟಿ ಭದ್ರಾ ಮೇಲ್ದಂಡೆ ರಾಷ್ಟ್ರೀಯ ಯೋಜನೆ ಘೋಷಿಸಬಹುದೆಂದು ಶಿಫಾರಸು ಮಾಡಿತು. 25–9–2022 ರಂದು ನಡೆದ ಸಾರ್ವಜನಿಕ ಬಂಡವಾಳ ಹೂಡಿಕೆ ಸಮಿತಿ ಯೋಜನೆಗೆ 5300ಕೋಟಿ ರುಪಾಯಿ ಅನುದಾನದ ನೆರವು ನೀಡಬಹುದೆಂದು ಶಿಫಾರಸ್ಸುಮಾಡಿತು. ನಂತರ 1–2–2023 ರಂದು ಕೇಂದ್ರ ಸಚಿವೆ ನಿರ್ಮಲ ಸೀತರಾಮನ್ ಮಂಡಿಸಿದ ಬಜೆಟ್ ನಲ್ಲಿ ಭದ್ರಾ ಮೇಲ್ದಂಡೆಗೆ 5300 ಕೋಟಿ ರು ಅನುದಾನ ಒದಗಿಸುವ ಘೋಷಣೆ ಮಾಡಿದ್ದರು.ಈ ಎಲ್ಲ ಪ್ರಕ್ರಿಯೆಗಳ ಹಿಂದಿನ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಸಿಎಂ ಬಸವರಾಜ ಬೊಮ್ಮಾಯಿ, ಜಲಸಂಪನ್ಮೂಲ ಸಚಿವ ಗೋವಿಂದ ಕಾರಜೋಳ ಖುದ್ದು ಆಸಕ್ತಿ ವಹಿಸಿ ರಾಷ್ಟ್ರೀಯ ಯೋಜನೆ ಘೋಷಣೆಗೆ ಶ್ರಮ ಹಾಕಿದ್ದರು. ಕ್ಯಾಬಿನೆಟ್ ಒಪ್ಪಿಗೆ ಮಾತ್ರ ಬಾಕಿ ಉಳಿದಿತ್ತು. ತಾವೇ ಯೋಜನೆ ತಯಾರಿಸಿ ಕೇಂದ್ರದ ನೆರವಿಗಾಗಿ ಶ್ರಮಿಸಿದ ರಾಜ್ಯದ ಬಿಜೆಪಿ ಸಂಸದರು ಈಗ ಕೇಂದ್ರದಿಂದ ಮಧ್ಯ ಕರ್ನಾಟಕಕ್ಕೆ ಅನ್ಯಾಯವಾಗುತ್ತಿದ್ದರೂ ಮೌನ ವಹಿಸಿರುವುದು ಅರ್ಥವಾಗದಂತಾಗಿದೆ. ಪಕ್ಷ ರಾಜಕಾರಣ ಬದಿಗೆ ಸರಿಸಿ ಜನರ ಪರವಾಗಿ ನಿಲ್ಲುವಂತೆ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಸಲಹೆ ಮಾಡಿದೆ.

**1800 ಕೋಟಿ ಅನುದಾನ ಖೋತಾ:** ಕೇಂದ್ರ ಜಲಶಕ್ತಿ ಸಚಿವಾಲಯದ ಕಾರ್ಯದರ್ಶಿ ದೇಬರ್ಶಿ ಮುಖರ್ಜಿ ಬರೆದ ಪತ್ರದ ಅನುಸಾರ ರಾಜ್ಯ ಸರ್ಕಾರವೇನಾದರೂ ಪಾಲನೆ ಮಾಡಿದಲ್ಲಿ ಕೇಂದ್ರದಿಂದ ಬರಬೇಕಾದ 5300 ಕೋಟಿ ರು ಅನುದಾನದಲ್ಲಿ 1800 ಕೋಟಿ ರು ಖೋತವಾಗುತ್ತದೆ. ಮಾರ್ಚ್ 2022 ರವರೆಗೆ ಖರ್ಚು ಮಾಡಿದ ಅನುದಾನ ಆಧರಿಸಿ 5300 ಕೋಟಿ ರು ಕೇಂದ್ರದಿಂದ ಲಭ್ಯವಾಗಬೇಕಿತ್ತು. ಅಂದರೆ 14697 ಕೋಟಿ ರುಪಾಯಿ ಒಟ್ಟಾರೆ ಯೋಜನಾ ವೆಚ್ಚದಲ್ಲಿ 5528 ಕೋಟಿ ರುಪಾಯಿಯಷ್ಟು ರಾಜ್ಯ ಸರ್ಕಾರ ಖರ್ಚು ಮಾಡಿತ್ತು. ಉಳಿದ 9168 ಕೋಟಿ ರುಪಾಯಿಯಲ್ಲಿ ಕೇಂದ್ರ ಸರ್ಕಾರ ತನ್ನ ಪಾಲಿನ ಶೇ.60 ರಷ್ಟು ಮೊತ್ತ 5501 ಕೋಟಿ ಕೊಡಬೇಕಾಗಿದ್ದು ಅದನ್ನು 5300 ಕೋಟಿಗೆ ಸೀಮಿತಗೊಳಿಸಲಾಗಿತ್ತು.

ಹಾಲಿ ಕೇಂದ್ರ ಜಲಶಕ್ತಿ ಸಚಿವಾಲಯದ ಕಾರ್ಯದರ್ಶಿ ದೇಬರ್ಶಿ ಮುಖರ್ಜಿ ಬರೆದ ಪತ್ರದ ಪ್ರಕಾರ ಇಲ್ಲಿಯವರೆಗೆ ಎಂಬ ಸಂಗತಿ ಪಾಲಿಸದರೆ ಅನುದಾನ ಖೋತ ಗ್ಯಾರಂಟಿ. ಕಳೆದ ಮಾರ್ಚ್ 2024 ರವರೆಗೆ ಭದ್ರಾ ಮೇಲ್ದಂಡೆಗೆ 8785ಕೋಟಿ ರು ಖರ್ಚು ಮಾಡಲಾಗಿದ್ದು 5910 ಕೋಟಿ ರುಪಾಯಿ ಬಾಕಿ ಉಳಿಯುತ್ತದೆ. ಈ ಮೊತ್ತಕ್ಕೆ ಶೇ.60 ರಷ್ಟು ಅನುದಾನವ ಕೇಂದ್ರ ಸರ್ಕಾರ ನೀಡಿದ್ದಲ್ಲಿ 3546 ಕೋಟಿ ರು ಮಾತ್ರ ಲಭ್ಯವಾಗುತ್ತದೆ. ಕೇವಲ ಎರಡು ವರ್ಷಕ್ಕೆ 1800 ಕೋಟಿ ರು ಖೋತವಾಗುತ್ತದೆ. ಹಾಗೇನಾದರೂ ಮುಂದಿನ ಮಾರ್ಚ್ ವರೆಗೆ ಇದೇ ರೀತಿ ಕ್ಯಾತೆಗಳು ಮುಂದುವರಿದರೆ ಕೇಂದ್ರ ತಾನು ನೀಡಬೇಕಾದ ನೆರವು ಎರಡು ಸಾವಿರ ಕೋಟಿ ರುಪಾಯಿಗೆ ಬಂದು ನಿಂತಲ್ಲಿ ಅನುಮಾನವಿಲ್ಲವೆಂದು ನೀರಾವರಿ ಹೋರಾಟ ಸಮಿತಿ ಪದಾಧಿಕಾರಿಗಳು ಆತಂಕ ವ್ಯಕ್ತಪಡಿಸಿದರು. ರಾಜ್ಯದ ಬಿಜೆಪಿ ಸಂಸದರು ಭದ್ರಾ ಮೇಲ್ದಂಡೆ ವಿಚಾರದಲ್ಲಿ ಬದ್ಧತೆ ಪ್ರದರ್ಶಿಸಬೇಕು. ಸಚಿವ ನಿರ್ಮಲಾ ಸೀತರಾಮನ್, ಸಂಸದರಾದ ಬಸವರಾಜ ಬೊಮ್ಮಾಯಿ, ಗೋವಿಂದ ಕಾರಜೋಳ ಕೇಂದ್ರದಿಂದ ದ್ರೋಹವಾಗದಂತೆನೋಡಿಕೊಳ್ಳಬೇಕೆಂದು ಸಮಿತಿ ಪದಾಧಿಕಾರಿಗಳು ಆಗ್ರಹಿಸಿದರು. ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಕೆ.ಆರ್. ದಯಾನಂದ,ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ, ಸರ್ವೋದಯ ಕರ್ನಾಟಕದ ಮುಖ್ಯಸ್ಥ ಜೆ.ಯಾದವರೆಡ್ಡಿ, ಸಿಪಿಐ ಜಿಲ್ಲಾ ಕಾರ್ಯದರ್ಶಿ ಸುರೇಶ್ ಬಾಬು, ರೈತ ಸಂಘದ ಜಿಲ್ಲಾಧ್ಯಕ್ಷ ಹಂಪಯ್ಯಮಾಳಿಗೆ ಧನಂಜಯ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ ಇದ್ದರು.

## ನರೇಗಾ ಕಾರ್ಮಿಕರೊಂದಿಗೆ ಜಿಪಂ ಸಿಇಓ ಚರ್ಚೆ

» **ಚಳ್ಳಕೆರೆ**

ಗ್ರಾಮೀಣ ಭಾಗದ ಜನರಿಗೆ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳನ್ನು ಜಾರಿಗೊಳಿಸಿ, ಜಾಬ್‌ಕಾರ್ಡ್‌ಧಾರಿತ ಕೂಲಿಕಾರ್ಮಿಕರಿಗೆ ಸಕಾಲದಲ್ಲಿ ಕೂಲಿಯನ್ನು ಪಾವತಿಸಿ ಮಾನವ ದಿನಗಳನ್ನು ಹೆಚ್ಚು ನಿರ್ಮಿಸಬೇಕಿದೆ. ಸರ್ಕಾರದ ಸೂಚನೆಯಂತೆ ನರೇಗಾ ಕೂಲಿಕಾರ್ಮಿಕರಿಗೆ ಯಾವುದೇ ಹಂತದಲ್ಲಿ ಕೂಲಿಹಣ ವಿಳಂಬವಾಗದಂತೆ ಜಾಗ್ರತೆ ವಹಿಸಬೇಕೆಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್. ಜೆ.ಸೋಮಶೇಖರ್ ತಿಳಿಸಿದರು.

ಅವರು, ಬುಧವಾರ ತಾಲ್ಲೂಕಿನ ದೊಡ್ಡೇರಿ, ಎನ್.ಮಹದೇವಪುರ ಗ್ರಾಮ ಪಂಚಾಯಿತಿಯಲ್ಲಿ ನಡೆಯುತ್ತಿರುವ ನರೇಗಾ ಕಾಮಗಾರಿಗಳನ್ನು ಪರಿಶೀಲನೆ ನಡೆಸಿ, ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ವಿವಿಧ



ಕೂಲಿಕಾರ್ಮಿಕರಬಳಿಇದ್ದಜಾಬ್‌ಕಾರ್ಡ್‌ಗಳನ್ನು ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರೊಂದಿಗೆ ಚರ್ಚೆ ನಡೆಸಿದರು.

ಪುಟ 2

## ಸಿಎಂ ಹುದ್ದೆ ಕೇಳುತ್ತಿರುವವರಿಗೆ ಎಚ್ಚರಿಕೆ ಕೊಡಿ: ರಾಹುಲ್‌ಗೆ ರಾಜ್ಯದ ಕಾಂಗ್ರೆಸ್ ಮುಖಂಡರ ಪತ್ರ

» **ಬೆಂಗಳೂರು**

ಕಳೆದ ಕೆಲವು ದಿನಗಳಿಂದ □ಮುಖ್ಯಮಂತ್ರಿಯಾಗಲು ನಾನು ಅರ್ಹ□, □ನಾನೇ ಮುಂದಿನ ಮುಖ್ಯಮಂತ್ರಿ□ ಎಂದೆಲ್ಲಾ ಹೇಳಿಕೆ ನೀಡುತ್ತಿರುವ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರ ವಿರುದ್ಧ ಅದೇ ಕಾಂಗ್ರೆಸ್ ಪಕ್ಷದ ಕೆಲವು ಹಿರಿಯ ನಾಯಕರು ಸಂಸತ್ತಿನ ವಿಪಕ್ಷ ನಾಯಕರೂ, ಪಕ್ಷದ ರಾಷ್ಟ್ರೀಯ ನಾಯಕರೂ ಆದ ರಾಹುಲ್ ಗಾಂಧಿಯವರಿಗೆ ಪತ್ರವೊಂದನ್ನು ಬರೆದಿದ್ದಾರೆ. ಕಾಂಗ್ರೆಸ್ ಮುಖಂಡರಾದ ಬಿ ಎಲ್ ಶಂಕರ್, ವಿ ಎಸ್ ಉಗ್ರಪ್ಪ, ಎಚ್ ಎಂ ರೇವಣ್ಣ, ವಿ ಆರ್ ಸುದರ್ಶನ್, ಎಲ್ ಹನುಮಂತಯ್ಯ, ಬಿ ಎನ್ ಚಂದ್ರಪ್ಪ, ಪ್ರಕಾಶ್ ರಾಥೋಡ್, ಪಿ ಆರ್ ರಮೇಶ್, ದ್ವಾರಕಾನಾಥ್ ಸಿ ಎಸ್, ಎಚ್ ಎಸ್ ಚಂದ್ರಮೌಳಿ, ಅಮರ್ ನಾಥನ್, ಖಲೀದ್ ಅಹ್ಮದ್ , ಮಹಬೂಬ್ ಪಾಶಾ ಹಾಗೂ ಮೋಹನ್ ಕೊಂಡಜ್ಜಿ ಇವರುಗಳು ಸೇರಿ ಈ ಪತ್ರವನ್ನು ಬರೆದಿದ್ದಾರೆ. ಈ ಪತ್ರವನ್ನು ಕೆ ಸಿ ವೇಣುಗೋಪಾಲ್ ಮತ್ತು ರಣದೀಪ್ ಸುರ್ಜೇವಾಲಾ ಅವರಿಗೂ ಕಳಿಸಿಕೊಡಲಾಗಿದೆ.

ಪುಟ 2

**ಪ್ರಮುಖ ಸುದ್ದಿ**

# 3 ಕೋಟಿ ವೆಚ್ಚದ ಬಸ್ ನಿಲ್ದಾಣ ಉದ್ಘಾಟಿಸಿದ: ಶಾಸಕ

» **ಹೊಸದುರ್ಗ**

ಬಸ್ ನಿಲ್ದಾಣ ಸಾರ್ವಜನಿಕ ಆಸ್ತಿ. ಸಾರ್ವಜನಿಕರು ಅದನ್ನು ಸದ್ಬಳಕೆ ಮಾಡಿಕೊಳ್ಳಬೇಕೇ ಹೊರತು ದುರ್ಬಳಕೆ ಮಾಡಿಕೊಳ್ಳಬಾರದು. ಯಾರಾದರೂ ಇಲ್ಲಿ ಅಕ್ರಮ ಚಟುವಟಿಕೆ ನಡೆಸಿದರೆ, ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಬಿಜಿ ಗೋವಿಂದಪ್ಪ ಹೇಳಿದರು.

ತಾಲೂಕಿನ ಶ್ರೀರಾಂಪುರದಲ್ಲಿ ಸುಮಾರು 3.ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಗ್ರಾಮ ಪಂಚಾಯಿತಿ ನೂತನ ಬಸ್ ನಿಲ್ದಾಣದ ಉದ್ಘಾಟನೆ, ಜಲ ಜೀವನ್ ಯೋಜನೆಯ ಭೂಮಿಪೂಜೆ, ಪೋಷಣ್ ಅಭಿಯಾನ, ಹೊಲಿಗೆ ಯಂತ್ರ ವಿತರಣೆ ಹಾಗೂ ವಾಣಿಜ್ಯ ಮಳಿಗೆಗಳ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಗ್ರಾಮ ಪಂಚಾಯಿತಿಗಳು ಸ್ವಾವಲಂಬಿಗಳಾದಾಗ ಮಾತ್ರ, ಸಾರ್ವಜನಿಕರಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಸಾಧ್ಯ. ಈ ನಿಟ್ಟಿನಲ್ಲಿ 11 ವಾಣಿಜ್ಯ ಮಳಿಗೆ ನಿರ್ಮಿಸಿಕೊಡಲಾಗಿದೆ.



ಇನ್ನೂ ವಾಣಿಜ್ಯ ಮಳಿಗೆ ನಿರ್ಮಿಸಲು ಜಾಗವು ಇದೆ. ಇದನ್ನು ಸ್ಥಳೀಯ ಗ್ರಾಮಾಡಳಿತ ಸರಿಯಾದ ರೀತಿಯಲ್ಲಿ ಬಳಕೆ ಮಾಡಿಕೊಳ್ಳಬೇಕು. ಈ ಮೂಲಕ ಗ್ರಾ.ಪಂನ ಆರ್ಥಿಕ ಮೂಲವನ್ನು ವೃದ್ಧಿಸಿಕೊಳ್ಳಬೇಕು ತಿಳಿಸಿದರು.

ಜನರಿಂದ ಕೆಲಸ ಹೇಳಿಸಿಕೊಂಡು ಮಾಡುವ ವ್ಯಕ್ತಿ ನಾನಲ್ಲ, ನನಗೆ ಮತಹಾಕಿದ ಮತದಾರರ ಮನದಾಳವನ್ನು ಅರಿತು ಕೆಲಸ ಮಾಡುವವನು ನಾನು. ಇಲ್ಲಿಯವರೆಗೂ ನಾನು ತಾಲೂಕಿನ ಅಭಿವೃದ್ದಿಯ ಬಗ್ಗೆ ಯಾರಿಂದಲೂ ಹೇಳಿಸಿಕೊಂಡು ಕೆಲಸ ಮಾಡಿಲ್ಲ. ನನ್ನ ಜನರಿಗೆ ಏನು ಬೇಕು ಎಂಬುದನ್ನು ಅರಿತು ಕೆಲಸ ಮಾಡಿದ್ದೇನೆ. ಅದರ ಪರಿಣಾಮವೇ ಇಡೀ ತಾಲೂಕಿಗೆ ನೀರು, ಬೆಳಕು. ರಸ್ತೆ ಅಬೀವೃದ್ಧಿ ಪಡಿಸಲು ಸಾಧ್ಯವಾಗಿದೆ ಎಂದರು.

**ನನ್ನ ರಾಜಕೀಯ ಕರ್ಮ ಭೂಮಿ ಶ್ರೀರಾಂಪುರ:** ನನ್ನ ರಾಜಕೀಯ ಕರ್ಮ ಭೂಮಿಯಾದ ಶ್ರೀರಾಂಪುರದ ಜನರ ಋಣ ತೀರಿಸುವ ಕೆಲಸ ಮಾಡಿದ್ದೇನೆ. ಜನರಿಗೆ ಕುಡಿಯುವ ನೀರು, ಕೃಷಿಗೆ ನೀರು, ಕೆರೆಗಳಿಗೆ ನೀರು ಒದಗಿಸಲು ಭದ್ರಾ ಯೋಜನೆಯನ್ನು ಅನುಷ್ಠಾನ ಗೊಳಿಸಿ, ಈಗಾಗಲೇ ಕೆಲಸವೂ ಮುಕ್ತಾಯದ ಹಂತದಲ್ಲಿದೆ. ರೈತರಿಗೆ ತೊಂದರೆಯಾಗದಂತೆ ಹಗಲು ವೇಳೆ ವಿದ್ಯುತ್ ನೀಡಲು ಗರಗ ಬಳಿ ಸೋಲಾರ್ ಪಾರ್ಕ ನಿರ್ಮಾಣ, ಗ್ರಾಮಗಳಿಗೆ ನಿರಂತರ ವಿದ್ಯುತ್ ಸರಬರಾಜಿಗೆ ಎಸ್.ನೇರಲಕೆರೆ ಬಳಿ ಮತ್ತೊಂದು ಎಂ.ಯು.ಎಸ್ ಘಟಕ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗಿದೆ ಎಂದರು.

**ಭದ್ರಾ ನೀರು ಹರಿಸಿಯೇ ತೀರುತ್ತೇನೆ:** ತಾಲೂಕಿಗೆ ಭದ್ರಾ ನೀರು ಬರಲ್ಲ ಎನ್ನುವ ಮಾತುಗಳನ್ನು ವಿರೋಧಿಗಳು ಆಡುತ್ತಿದ್ದಾರೆ. ಇನ್ನೊಂದು ವರ್ಷದಲ್ಲಿ ತಾಲೂಕಿಗೆ ಭದ್ರಾ ಜಲಾಶಯದಿಂದ ಕುಡಿಯುವ ನೀರನ್ನು ತಂದೇ ತೀರುತ್ತೇನೆ. ನಾನು ಈ ಮಾತನ್ನು ಪ್ರಚಾರಕ್ಕಾಗಿ ಹೇಳುತ್ತಿಲ್ಲ.

ಪುಟ 2





## ಫಾಸ್ಟ್ ನ್ಯೂಸ್

### ೩ ಕೋಟಿ ವೆಚ್ಚದ ಬಸ್ ನಿಲ್ದಾಣ ಉದ್ಘಾಟಿಸಿದ: ಶಾಸಕ

» ಮೊದಲ ಪುಟದಿಂದ

ನನಗೆ ರಾಜಕೀಯ ಇಚ್ಛಾಶಕ್ತಿ ಇದೆ, ಭದ್ರತೆಯಿದೆ. ನನ್ನ ರಾಜಕೀಯ ಜೀವನದಲ್ಲಿ ಸಾಧಿಸಿದ ಆತ್ಮಸಂತೋಷ ನನಗಿದೆ ಇದನ್ನು ಜನರು ಅರಿಯಬೇಕು. ಯಾವುದೇ ವ್ಯಕ್ತಿಯನ್ನು ಆಯ್ಕೆ ಮಾಡುವಾಗ ಯೋಚಿಸಿ ಆಯ್ಕೆ ಮಾಡಿ ಎಂದರು. ಕಾರ್ಯಕ್ರಮದಲ್ಲಿ ಸ್ಥಳೀಯ ಗ್ರಾ.ಪಂ.ಅಧ್ಯಕ್ಷೆ ಶ್ವೇತಾರಂಗಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ, ಕಾಂಗ್ರೆಸ್ ಮುಖಂಡರಾದ ಆಗ್ರೋ ಶಿವಣ್ಣ, ದೀಪಿಕ, ಲೋಕೇಶ್ವರಪ್ಪ, ಆರ್ ದಾಸಪ್ಪ, ಜಿ.ಪಂ.ಮಾಜಿ ಅಧ್ಯಕ್ಷೆ ಗಿರಿಜಾ ಪೂಜಾರಿನಿಂಗಪ್ಪ, ಗ್ರಾಮ ಮಾಜಿ ಅಧ್ಯಕ್ಷರುಗಳಾದ ಎಸ್ ಸಿ ರಮೇಶ್, ಸುಮತಿ ನಿರಂಜನಮೂರ್ತಿ, ತಾಪಂ ಇಓ ಸುನಿಲ್‌ಕುಮಾರ್, ಶ್ರೀರಾಂಪುರ ಠಾಣೆ ಪಿಐ ಮಧು, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ಹರೀಶ್ ಕುಮಾರ್, ಕುಡಿಯುವ ನೀರು ಇಲಾಕೆ ಎಇಇ ಧನಂಜಯ, ಪಿಡಿಓ ಪಾಲಾಕ್ಷಪ್ಪ, ಗ್ರಾಪಂ ಉಪಾಧ್ಯಕ್ಷ ಶಶಿಧರ, ಗ್ರಾಪಂ ಸದಸ್ಯರುಗಳು ಹಾಜರಿದ್ದರು. ಕಾರ್ಯಕ್ರಮಕ್ಕೂ ಮುನ್ನಾ ಅಂಬೇಡ್ಕರ್ ವೃತ್ತದಲ್ಲಿ ಜಲ ಜೀವನ್ ಯೋಜನೆಯ ಅನುಷ್ಠಾನಕ್ಕೆ ಭೂಮಿಪೂಜೆ ನೆರವೇರಿಸಿದರು. ನೂತನ ಬಸ್ ನಿಲ್ದಾಣದಲ್ಲಿ ನಿರ್ಮಿಸಲಾಗಿರುವ ವಾಣಿಜ್ಯ ಮಳಿಗೆಗಳನ್ನು ಉದ್ಘಾಟಿಸಿದರು. ಅಲ್ಲದೆ ಚರ್ಮ ಕುಠೀರ ಯೋಜನೆಯಲ್ಲಿ ತರಬೇತಿ ಹೊಂದಿದ ಫಲಾನುಭವಿಗಳಿಗೆ ಹೊಲಿಗೆ ಯಂತ್ರಗಳನ್ನು ವಿತರಿಸಿದರು.

### ಸಿಎಂ ಹುದ್ದೆ ಕೇಳುತ್ತಿರುವವರಿಗೆ ಎಚ್ಚರಿಕೆ ಕೊಡಿ: ರಾಹುಲ್‌ಗೆ ಕಾಂಗ್ರೆಸ್ ಮುಖಂಡರ ಪತ್ರ

» ಮೊದಲ ಪುಟದಿಂದ

**ಪತ್ರದಲ್ಲಿ ಏನಿದೆ?:** ಮೇಲ್ಕಂಡ ಮುಖಂಡರು ರಾಹುಲ್ ಗಾಂಧಿಯವರಿಗೆ ಬರೆದಿರುವ ಪತ್ರದಲ್ಲಿ ಈಗ ಮನಸಿಗೆ ಬಂದಂತೆ ಹೇಳಿಕೆ ಕೊಡುತ್ತಿರುವ ನಾಯಕರು ಇಡೀ ಕಾಂಗ್ರೆಸ್ ಪಕ್ಷದಲ್ಲಿ ನೈತಿಕಸ್ಥೈರ್ಯ ಕುಸಿಯುವಂತೆ ಮಾಡುತ್ತಿದ್ದಾರೆ, ಇದು ಸಮಾಜಕ್ಕೆ ಕೆಟ್ಟ ಸಂದೇಶ ನೀಡುತ್ತಿದೆ ಎಂದು ಆರೋಪಿಸಲಾಗಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಭಾರೀ ಬಹುಮತದಿಂದ ಆರಿಸಿ ಬಂದಿರುವ ಕಾಂಗ್ರೆಸ್ ಪಕ್ಷವು ಐದು ಗ್ಯಾರಂಟಿ ಯೋಜನೆಗಳ ಮೂಲಕ ಅಪಾರ ಜನಬೆಂಬಲ ಪಡೆದುಕೊಂಡು ನಡೆದುಕೊಂಡು ಹೋಗುತ್ತಿದೆ. ಈ ಸಂದರ್ಭದಲ್ಲಿ ಬಿಜೆಪಿ-ಜೆಡಿಎಸ್ ಕೂಟವು ಹತಾಶ ಮನಸ್ಥಿತಿ ತಲುಪಿದ್ದು ಇದೀಗ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರಿನ ಪ್ರಸ್ತಾಪವೇ ಇರದ "ಮುಡಾ" ಪ್ರಕರಣವನ್ನು ಕೈಗೆತ್ತಿಕೊಂಡಿದ್ದಾರೆ. ವಾಮಮಾರ್ಗವನ್ನು ಬಳಸಿಕೊಂಡು ರಾಜ್ಯಪಾಲರ ಮೂಲಕ ಮುಡಾ ಪ್ರಕರಣದ ತನಿಖೆ ನಡೆಸಲು ಅನುಮತಿಯನ್ನೂ ಪಡೆದಿದ್ದಾರೆ. ರಾಜ್ಯಪಾಲರ ಈ ನಡೆಯನ್ನು ಪ್ರಶ್ನಿಸಿ ಈ ಕುರಿತು ಹೈಕೋರ್ಟಿನಲ್ಲಿ ಸಿ ಎಂ ಸಿದ್ದರಾಮಯ್ಯ ಅವರು ಆಕ್ಷೇಪಣೆ ಅರ್ಜಿ ಸಲ್ಲಿಸಿದ್ದು ಅದರ ವಿಚಾರಣೆ ನಡೆಯುತ್ತಿದೆ. ಆದರೆ ಬಿಜೆಪಿ ಜೆಡಿಎಸ್ ನಾಯಕರು ಸಿದ್ದರಾಮಯ್ಯನವರ ರಾಜೀನಾಮೆಗಾಗಿ ಒತ್ತಾಯ ಮಾಡುತ್ತಿದ್ದಾರೆ. ಇಂತಹ ರಾಜಕೀಯ ವಾತಾವರಣದಲ್ಲಿ ಕಾಂಗ್ರೆಸ್ ಪಕ್ಷದ ಆರಕ್ಕಿಂತ ಹೆಚ್ಚು ನಾಯಕರು ಮುಖ್ಯಮಂತ್ರಿ ಹುದ್ದೆ ತಮಗೇ ಸಿಗಬೇಕು ಎಂದು ಪ್ರತಿನಿತ್ಯ ಹೇಳಿಕೆ ನೀಡುತ್ತಿದ್ದಾರೆ. ಈ ಸಂದರ್ಭದಲ್ಲಿ ಬಿಜೆಪಿ-ಜೆಡಿಎಸ್ ವಿರುದ್ಧ ಹೋರಾಟ ನಡೆಸುವುದರ ಬದಲಾಗಿ ಹೀಗೆ ಹೇಳಿಕೆ ನೀಡುತ್ತಿರುವುದರಿಂದ ನಮ್ಮ ನಾಯಕತ್ವ ಮತ್ತು ಕಾರ್ಯಕರ್ತರು ಸರ್ಕಾರದ ಮೇಲೆ ನಂಬಿಕೆ ಕಳೆದುಕೊಳ್ಳುವಂತಾಗಿದೆ. ಪಕ್ಷದ ಮೇಲೆ ಭರವಸೆ ಕುಸಿಯುತ್ತಿದೆ. ಕರ್ನಾಟಕದ ಜನರಿಗೂ ಸಹ ಸರ್ಕಾರದ ಮೇಲೆ ವಿಶ್ವಾಸ ಕುಂದುತ್ತಿದೆ. ಸರ್ಕಾರದ ಆಡಳಿತ ಕೆಲಸಗಳಿಗೂ ಇದರಿಂದ ಧಕ್ಕೆಯುಂಟಾಗಿದೆ ಎಂದು ದೂರು ಪತ್ರದಲ್ಲಿ ತಿಳಿಸಲಾಗಿದೆ. ಮಾನ್ಯ ರಾಹುಲ್ ಗಾಂಧಿಯವರು ಕಾಂಗ್ರೆಸ್ ನಾಯಕರ ಈ ಬಿಡುಬೀಸು ಹೇಳಿಕೆಗಳನ್ನು ಕೂಡಲೇ ಗಮನಿಸಿ ಅಂತವರಿಗೆ ಯಾವುದೇ ಅನಾಹುತಕಾರಿ ಹೇಳಿಕೆಗಳನ್ನು ಕೊಡದಂತೆ ನಿರ್ದೇಶನ ನೀಡಿ ಎಚ್ಚರಿಕೆ ಕೊಡಬೇಕು ಎಂದು ಪತ್ರದಲ್ಲಿ ಕೋರಲಾಗಿದೆ.

### ನರೇಗಾ ಕೂಲಿ ಕಾರ್ಮಿಕರೊಂದಿಗೆ ಜಿಪಂ ಸಿಇಓ ಚರ್ಚೆ

» ಮೊದಲ ಪುಟದಿಂದ

ಕಾಮಗಾರಿಯಲ್ಲಿ ನಿರತರಾದ ನರೇಗಾ ಕೂಲಿಕಾರ್ಮಿಕರೊಂದಿಗೆ ಚರ್ಚಿಸಿದ ಸಿಇಓ ಸೋಮಶೇಖರ್, ಯಾವುದೇ ಕಾರಣಕ್ಕೂ ನಿಮ್ಮಬಳಿ ಇರುವ ಜಾಬ್ ಕಾರ್ಡ್‌ಗಳನ್ನು ಬೇರೆಯವರಿಗೆ ನೀಡಬೇಡಿ, ನಿಮ್ಮ ಜಾಬ್‌ಕಾರ್ಡ್ ಪಡೆದು ಹಣವನ್ನು ಪಡೆಯುವ ಅನೇಕ ಉದಾಹರಣೆಗಳಿವೆ. ಆದ್ದರಿಂದ ಜಾಬ್‌ಕಾರ್ಡ್‌ಗಳು ನಿಮ್ಮ ಬದುಕಿನ ಆಸರೆಗಾಗಿ ಸರ್ಕಾರ ನೀಡಿದೆ ಅವುಗಳನ್ನು ಸೂಕ್ತವಾಗಿ ಸದುಪಯೋಗಪಡಿಸಿಕೊಳ್ಳುವತ್ತ ಗಮನ ನೀಡಬೇಕೆಂದರು. ಉಪಕಾರ್ಯದರ್ಶಿ ತಿಮ್ಮಪ್ಪ, ತಾಪಂ ಇಓ ಎಚ್.ಶಶಿಧರ, ನರೇಗಾ ಸಹಾಯಕ ನಿರ್ದೇಶಕ ಸಂತೋಷ್‌ಕುಮಾರ್, ಎಡಿಪಿಸಿ ಮೋಹನ್‌ಕುಮಾರ್, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಪಿಡಿಒಗಳು ಮುಂತಾದವರು ಉಪಸ್ಥಿತರಿದ್ದರು.

## ಪಿಯು ಉಪನಿರ್ದೇಶಕ ಪುಟ್ಟಸ್ವಾಮಿ ಹೇಳಿಕೆ

# ಕ್ರೀಡಾ ಶಿಕ್ಷಣದಿಂದ ಶಿಸ್ತು, ಆರೋಗ್ಯ





» **ಚಿತ್ರದುರ್ಗ**

ಕ್ರೀಡೆ ಶಿಕ್ಷಣದ ಅವಿಭಾಜ್ಯ ಅಂಗ. ಕ್ರೀಡಾ ಶಿಕ್ಷಣದಿಂದ ವಿದ್ಯಾರ್ಥಿಗಳಲ್ಲಿ ಶಿಸ್ತು ಮೂಡುವುದರ ಜೊತೆಗೆ ಆರೋಗ್ಯವು ವೃದ್ಧಿಸುತ್ತದೆ. ಮಕ್ಕಳು ಕ್ರೀಡೆಗಳಲ್ಲಿ ಭಾಗವಹಿಸುವ ಮೂಲಕ ಉತ್ತಮ ನಡೆ ಹಾಗೂ ಗುಣಗಳನ್ನು ರೂಢಿಸಿಕೊಳ್ಳಬಹುದು ಎಂದು ಪಿಯು ಉಪನಿರ್ದೇಶಕ ಪುಟ್ಟಸ್ವಾಮಿ ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯ ಪದವಿ ಪೂರ್ವ ವಿಭಾಗ ಹಾಗೂ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ವತಿಯಿಂದ ಬುಧವಾರ ನಗರದ ಒನಕೆ ಓಬವ್ವಕ್ರೀಡಾಂಗಣದಲ್ಲಿ ಆಯೋಜಿಸಲಾದ ಜಿಲ್ಲಾ ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾ ಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡೆಯಲ್ಲಿ ಶಿಸ್ತು ಪಾಲಿಸುವುದು ಮುಖ್ಯ. ಈ ಮೂಲಕ ಕ್ರೀಡೆಯಲ್ಲಿ ಮೈಲಿಗಲ್ಲನ್ನು ಸಾಧಿಸಲು ಸಾಧ್ಯ. ಕ್ರೀಡಾ ಕೂಟದಲ್ಲಿ ಭಾಗವಹಿಸಿರುವ ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆ, ಸಾಮಾರ್ಥ್ಯಗಳನ್ನು ಪ್ರದರ್ಶಿಸುವ ಮೂಲಕ ಮುಂದೆ ರಾಜ್ಯ, ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಚಿತ್ರದುರ್ಗ ಜಿಲ್ಲೆಯನ್ನು ಪ್ರತಿನಿಧಿಸುವಂತಾಗಬೇಕು ಎಂದು ಕ್ರೀಡಾಪಟುಗಳಿಗೆ ಪುಟ್ಟಸ್ವಾಮಿ ಕಿವಿ ಮಾತು ಹೇಳಿದರು. ಪ್ರಾಂಶುಪಾಲರ ಸಂಘದ ಅಧ್ಯಕ್ಷ ಎಸ್.ದೇವೇಂದ್ರಪ್ಪ ಮಾತನಾಡಿ, ಕ್ರೀಡೆಯು ದೈಹಿಕ ಹಾಗೂ ಮಾನಸಿಕ ಸದೃಢತೆಯನ್ನು, ದೇಹವನ್ನು ಬಲಿಷ್ಠವಾಗಿಸುವ ಏಕಮಾತ್ರ ಮಾರ್ಗವಾಗಿದೆ. ಕ್ರೀಡೆಯು ದೇಹವನ್ನು ಸದೃಢವಾಗಿಸುವುದರ ಜೊತೆಗೆ ಮಾನಸಿಕವಾಗಿ ನಮ್ಮ ಗುರಿಯನ್ನು ಸಾಧಿಸುವ ಚಿಂತನೆ ನೀಡುತ್ತದೆ ಎಂದರು.

ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಚಾರ್ಯ ಹೆಚ್.ಬಿ.ನರಸಿಂಹಮೂರ್ತಿ ಸ್ವಾಗತಿಸಿದರು. ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಹಿರಯ ಉಪನ್ಯಾಸಕ ಡಾ.ಬಿ.ಕೃಷ್ಣಪ್ಪ ಕ್ರೀಡಾ ಪ್ರತಿಜ್ಞಾವಿಧಿ ಬೋಧಿಸಿದರು. ಇದೇ ಸಂದರ್ಭದಲ್ಲಿ ದೈಹಿಕ ಶಿಕ್ಷಕ ಬೋಧಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಮಹಮ್ಮದ್ ರಿಜ್ವಾನ್, ಇಂದ್ರಣ್ಣ, ಬಸವರಾಜಪ್ಪ ಹಾಗೂ ಸಿದ್ದರಾಮಣ್ಣ ಅವರಿಗೆ ಸನ್ಮಾನಿಸಲಾಯಿತು.

ಜಿಲ್ಲಾಮಟ್ಟದ ಪದವಿ ಪೂರ್ವ ಕಾಲೇಜುಗಳ ಎರಡು ದಿನಗಳ ಕ್ರೀಡಾಕೂಟಕ್ಕೆ ಬುಧವಾರ ಚಾಲನೆ ನೀಡಿದ್ದು, ಗುಂಪು ಆಟಗಳಾದ ಫುಟ್‌ಬಾಲ್, ವಾಲಿಬಾಲ್, ಥ್ರೋಬಾಲ್, ಕಬ್ಬಡಿ, ಕೋಕೋ, ಬಾಸ್ಕೆಟ್ ಬಾಲ್ ಆಟಗಳು ನಡೆದವು. ಸೆ.12ರಂದು ಗುರುವಾರ ಬೆಳಿಗ್ಗೆ 6ಕ್ಕೆ ಬಾಲಕ, ಬಾಲಕಿಯರ ಗುಡ್ಡಗಾಡು ಓಟ ಹಾಗೂ ಬೆಳಿಗ್ಗೆ 9ಕ್ಕೆ ಆಥ್ಲೇಟಿಕ್ಸ್ ಕ್ರೀಡೆಗಳ ನಡೆಯಲಿವೆ. ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಆರ್. ಮಂಜುನಾಥ್, ಎನ್.ನರಸಿಂಹಮೂರ್ತಿ, ಬಿ.ಆರ್.ಶಿವಕುಮಾರ್, ಮಹೇಶ್ ಬಾಬು, ಉಪನ್ಯಾಸಕ ಸಂಘದ ಅಧ್ಯಕ್ಷ ಬಿ.ಆರ್. ಮಲ್ಲೇಶ್, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಸುಚೇತಾ ನೆಲವಿಗಿ, ಕ್ರೀಡಾ ಸಂಚಾಲಕ ಎ.ಎಸ್.ರಂಗಪ್ಪ ಸೇರಿದಂತೆ ಜಿಲ್ಲೆಯ 6 ತಾಲ್ಲೂಕಿನ ವಿವಿಧ ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಪ್ರಜಾಪ್ರಭುತ್ವ ದಿನಾಚರಣೆ: ಸಿದ್ಧತೆ ಪರಿಶೀಲನೆ



» **ಚಿತ್ರದುರ್ಗ**

ಇದೇ ಸೆಪ್ಟೆಂಬರ್ 15ರಂದು ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಜಿಲ್ಲೆಯಾದ್ಯಂತ140 ಕಿ.ಮೀಮಾನವ ಸರಪಳಿ ನಿರ್ಮಿಸಲಾಗುತ್ತಿದ್ದು, ಈ ಹಿನ್ನಲೆಯಲ್ಲಿ ಮೊಳಕಾಲ್ಮುರು ಶಾಸಕ ಎನ್.ವೈ.ಗೋಪಾಲಕೃಷ್ಣ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್ ಅವರು ಮೊಳಕಾಲ್ಮುರು ಮತ್ತು ಬಳ್ಳಾರಿ ಗಡಿ ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೊಳಕಾಲ್ಮುರು ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಅಂತರ ರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕುರಿತು ಪೂರ್ವಭಾವಿ ಸಭೆಯನ್ನು ನಡೆಸಿ, ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.

ಅಂತರ್ ರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಕರ್ನಾಟಕ ಉತ್ತರ ತುದಿಯಿಂದ ದಕ್ಷಿಣ ತುದಿಯವರೆಗೆ ಅಂದರೆ ಬೀದರ್‌ನಿಂದ ಚಾಮರಾಜನಗರ ವರೆಗೆ, ಮಾನವ ಸರಪಳಿ ರಚಿಸುವ ಮೂಲಕ ಆಚರಿಸಲು ಸರ್ಕಾರ ನಿರ್ಧರಿಸಿದೆ. ಪ್ರಜಾಪ್ರಭುತ್ವವು ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಆದರ್ಶಗಳು ಭಾರತೀಯ ಸಂವಿಧಾನ ಪೀಠಿಕೆಯ ಭಾಗ. ಆದ್ದರಿಂದ ಮಾನವ ಸರಪಳಿ ನಿರ್ಮಾಣ ಮಾಡುವ ಮೂಲಕ ಪ್ರಜಾಪ್ರಭುತ್ವ ಗೌರವಿಸುವಂತಹ ವಿಭಿನ್ನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಮೊಳಕಾಲ್ಮುರು ತಾಲ್ಲೂಕಿನ ಮೇಲಿನ ಕಣಿವೆ ಗ್ರಾಮದಿಂದ ಹಿರಿಯೂರು ತಾಲ್ಲೂಕಿನ ಜವನಗೊಂಡನಹಳ್ಳಿಯವರೆಗೆಒಟ್ಟು 140 ಕಿ.ಮೀ ದೂರದವರೆಗೆ ಮಾನವ ಸರಪಳಿ ನಿರ್ಮಿಸುವ ಮೂಲಕ ಪ್ರಜಾಪ್ರಭುತ್ವದ ಮಹತ್ವವನ್ನು ಪರಿಚಯಿಸಲಾಗುವುದು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಉಪ ಕಾರ್ಯದರ್ಶಿ ತಿಮ್ಮಪ್ಪ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ತಾಲ್ಲೂಕು ಪಂಚಾಯಿತಿ ಇಓ ಹನುಮಂತಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.



ಚಳ್ಳಕೆರೆ ನಗರದ ಬೆಸ್ಕಾಂ ಆವರಣದ ಶಕ್ತಿಗಣಪತಿ ದೇವಸ್ಥಾನದಲ್ಲಿ ಪ್ರತಿಷ್ಠಾಪನೆಗೊಂಡಿದ್ದ ಗಣೇಶನನ್ನು ಬುಧವಾರ ಪ್ರಮುಖ ಬೀದಿಗಳಲ್ಲಿ ಅದ್ದೂರಿ ಮೆರವಣಿಗೆ ಮೂಲಕ ವಿಸರ್ಜಿಸಲಾಯಿತು. ಎಇಇ ಶಿವಪ್ರಸಾದ್, ಸಿ.ನಾಗರಾಜು, ಚಂದ್ರಣ, ಮಂಜುನಾಥ, ವೀರೇಶ್, ಸಚಿನ್,ರಮೇಶ್, ಅರುಣ್ ಮೊದಲಾದವರು ಇದ್ದರು.

## ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸೆ.17ರಂದು ವಿಶ್ವಕರ್ಮ ಜಯಂತಿ: ಶಾಸಕ ಟಿ.ರಘುಮೂರ್ತಿ ಅಧ್ಯಕ್ಷತೆ



» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ಸೆ.17ರ ಮಂಗಳವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ಆಚರಿಸಲಿದ್ದು, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಕಾರ್ಯಕ್ರಮ ಅಧ್ಯಕ್ಷತೆ ವಹಿಸಲಿದ್ದು, ಸಮಾಜದ ಎಲ್ಲಾ ಬಂಧುಗಳು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ದಾರ್ ರೇಹಾನ್ ಪಾಷ ತಿಳಿಸಿದರು.

ಅವರು, ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸರ್ಕಾರ ಕಳೆದ ಕೆಲವು ವರ್ಷಗಳಿಂದ ಮಹಾನ್ ಪುರುಷರ ಜಯಂತಿ ಆಚರಣೆಗೆ ಅವಕಾಶ ಕಲ್ಪಿಸಿದೆ. ಈ ಸಂದರ್ಭದಲ್ಲಿ ಅವರ ಕೊಡುಗೆ, ತ್ಯಾಗ, ಬಲಿದಾನ, ಸೇವಾ ಕಾರ್ಯಗಳ ಬಗ್ಗೆ ಸಮಾಜಕ್ಕೆ ತಿಳಿಸುವ ಕಾರ್ಯ ಮಾಡಲಾಗುವುದು. ಸಮಾಜದ ಎಲ್ಲಾ ಬಂಧುಗಳು ತಪ್ಪದೆ ಭಾಗವಹಿಸುವಂತೆ ಮನವಿ ಮಾಡಿದರು.

ಮಾಜಿ ಅಧ್ಯಕ್ಷ ಡಿ.ವೆಂಕಟೇಶ್‌ಚಾರ್ ಮಾತನಾಡಿ, ವಿಶ್ವಕರ್ಮ ವೃತ್ತದಲ್ಲಿ ಪೂಜೆ ಸಲ್ಲಿಸಿದ ನಂತರ ಸೆ.17ರಂದು ತಾಲ್ಲೂಕು ಕಚೇರಿಯಲ್ಲಿ ಸರಳವಾಗಿ ಜಯಂತಿಯನ್ನು ಆಚರಣೆ ಮಾಡಲಾಗುವುದು. ಸಮುದಾಯದ ವತಿಯಿಂದ ದೊಡ್ಡ ಪ್ರಮಾಣದಲ್ಲಿ ಸಮುದಾಯದ ಎಲ್ಲಾ ಸಂಘಟನೆಗಳು ಸೇರಿ ಸೆ. 27ಶುಕ್ರವಾರ ಜಯಂತಿ ಆಚರಣೆ ಹಮ್ಮಿಕೊಂಡಿದ್ದು ಎಲ್ಲರೂ ಸಹಕಾರ ನೀಡಬೇಕು ಎಂದರು.

ಪೂರ್ವಭಾವಿ ಸಭೆಯಲ್ಲಿ ಪಿಎಸ್‌ಐ ಜೆ.ಶಿವರಾಜ್, ಬಿಸಿಎಂ ಇಲಾಖೆಯ ಲೀಲಾವತಿ, ಉಪಾಧ್ಯಕ್ಷ ವೈ.ನಾಗರಾಜು, ಯುವ ಘಟಕದ ಅಧ್ಯಕ್ಷ ಸೀತಾರಾಮಚಾರ್, ಸಹ ಕಾರ್ಯದರ್ಶಿ ಭರತ್‌ಕುಮಾರ್, ಖಜಾಂಚಿ ಜಿ.ಪಿ.ಪದ್ಮನಾಭಚಾರ್, ಮಹಿಳಾ ಘಟಕದ ಅಧ್ಯಕ್ಷೆ ಉಮಾದೇವಿ, ಮಹಿಳಾ ಘಟಕದಸ ಮಾಜಿ ಅಧ್ಯಕ್ಷ ಕಮಲಮ್ಮ, ಸರಸ್ವತಿ, ಎಂ.ಸುಮ, ರಾಜೇಶ್ವರಿ, ಸಿ.ಇ.ಪ್ರಸನ್ನಕುಮಾರ್, ಶ್ರೀನಿವಾಸ್‌ಚಾರ್, ಡಿ.ಶಿವಕುಮಾರ್ ರಾಜೇಂದ್ರಚಾರ್ ಮುಂತಾದವರು ಉಪಸ್ಥಿತರಿದ್ದರು. ಕಚೇರಿ ಎಸ್‌ಡಿಎ ಡಿ.ಶ್ರೀನಿವಾಸ್ ಸ್ವಾಗತಿಸಿ ವಂದಿಸಿದರು.

## ಪ್ರಮುಖ ಸುದ್ದಿ

## ವಿದ್ಯಾರ್ಥಿಗಳ ಜ್ಞಾನ ಸಂಪಾದನೆ ವಿಜ್ಞಾನದಿಂದ ಮಾತ್ರ ಸಾಧ್ಯ: ಬಿಇಒ ಕೆ.ಎಸ್.ಸುರೇಶ್

# ಚಳ್ಳಕೆರೆ ತಾಲ್ಲೂಕು ಮಟ್ಟದ ವಿಜ್ಞಾನ ವಸ್ತು ಪ್ರದರ್ಶನ





» **ಚಳ್ಳಕೆರೆ**

ವಿಶ್ವಮಟ್ಟದಲ್ಲಿ ನಾವುಗಳು ಪೈಪೋಟಿ ಎದುರಿಸಿ ಸಾಧನೆಯತ್ತ ಹೆಜ್ಜೆ ಇಡಬೇಕಾದರೆ ಅಭಿವೃದ್ಧಿಪಥದಲ್ಲಿ ದೇಶವನ್ನು ಗುರುತಿಸಬೇಕಾದರೆ ನಮಗೆ ವಿಜ್ಞಾನ ಅವಶ್ಯಕ. ವಿಜ್ಞಾನದ ಜ್ಞಾನದಿಂದ ಮಾತ್ರ ಹೊಸ ಸಂಶೋಧನೆಗಳನ್ನು ಮಾಡಬಹುದು. ಪ್ರೌಢಶಾಲಾ ಮಟ್ಟದಲ್ಲಿ ವಿದ್ಯಾರ್ಥಿಗಳು ವಿಜ್ಞಾನದ ಬಗ್ಗೆ ಹೆಚ್ಚು ಆಸಕ್ತಿ ಹೊಂದಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ಬುಧವಾರ ನಗರದ ಎಚ್‌ಟಿಟಿ ಸರ್ಕಾರಿ ಬಾಲಕಿಯರ ಪ್ರೌಢಶಾಲಾ ಆವರಣದಲ್ಲಿ ತಾಲ್ಲೂಕು ಮಟ್ಟದ ಪ್ರೌಢಶಾಲಾ ವಿಭಾಗದ ವಿಜ್ಞಾನ ವಸ್ತುಪ್ರದರ್ಶನದಲ್ಲಿ ವಿಜ್ಞಾನ ಮಾದರಿಗೆ ಚಾಲನೆ ನೀಡುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಅನುಪಸ್ಥಿತಿಯಲ್ಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಅವರು, ತಾಲ್ಲೂಕಿನಾದ್ಯಂತ ಸುಮಾರು 60ಕ್ಕೂ ಹೆಚ್ಚು ಪ್ರೌಢಶಾಲಾ ವಿದ್ಯಾರ್ಥಿಗಳು ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಪಾಲ್ಗೊಂಡಿದ್ದಾರೆ. ಹೊಸ, ಹೊಸ ಮಾದರಿಗಳನ್ನು ಸಿದ್ದಪಡಿಸಿ ತಾವು ಸಹ ವಿಜ್ಞಾನದಲ್ಲಿ ಸಬಲರು ಎಂಬುವುದನ್ನು ತೋರಿಸಿದ್ದಾರೆ. ವಿದ್ಯಾರ್ಥಿಗಳ ಕ್ರಿಯಾಶೀಲತೆ ಎಲ್ಲಾ ಹಂತದಲ್ಲೂ ನಾವು ಕಾಣಬಹುದು. ವಿಜ್ಞಾನ ವಸ್ತು ಪ್ರದರ್ಶನದಿಂದ ವಿದ್ಯಾರ್ಥಿಗಳಲ್ಲಿ ಬೌದ್ಧಿಕ ಜ್ಞಾನದ ಮಟ್ಟ ಹೆಚ್ಚುತ್ತದೆ. ಪ್ರತಿಯೊಬ್ಬ ವಿದ್ಯಾರ್ಥಿಗಳ ವಿಜ್ಞಾನ ವಿಷಯವನ್ನು ಅರ್ಥೈಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯೋಪಾಧ್ಯಾಯ ಈರಣ್ಣ ಮಾತನಾಡಿ, ನಮ್ಮ ಶಾಲೆಯಲ್ಲಿ ತಾಲ್ಲೂಕು ಮಟ್ಟದ ವಿಜ್ಞಾನ ವಸ್ತು ಪ್ರದರ್ಶನ ಹಮ್ಮಿಕೊಳ್ಳಲು ಶಿಕ್ಷಣ ಇಲಾಖೆ ಅವಕಾಶ ನೀಡಿರುವುದು ಸಂತಸ ತಂದಿದೆ. ನಮ್ಮ ಶಾಲೆಯ ಹಲವಾರು ವಿದ್ಯಾರ್ಥಿನಿಯರು ಹೊಸ ಪ್ರಯೋಗವನ್ನು ಸಿದ್ದಪಡಿಸಿದ್ದಾರೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಆಸಕ್ತಿಯಿಂದ ವಸ್ತು ಪ್ರದರ್ಶನದಲ್ಲಿ ಪಾಲ್ಗೊಂಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ಎಲ್ಲಾ ವಿದ್ಯಾರ್ಥಿಗಳು ವಿಜ್ಞಾನದ ಬಗ್ಗೆ ಹೆಚ್ಚು ಆಸಕ್ತಿ ತೋರುತ್ತಿರುವುದು ಶೈಕ್ಷಣಿಕ ದೃಷ್ಠಿಯಿಂದ ಉತ್ತಮ ಬೆಳವಣಿಗೆಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಡಿ.ಶ್ರೀನಿವಾಸ್, ಕಾರ್ಯದರ್ಶಿ ಡಿ.ಎಸ್.ಪಾಲಯ್ಯ, ಸಹ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ರಾಜಕುಮಾರ್, ರುದ್ರಮುನಿ, ನಾಗರಾಜು ಮುಂತಾದವರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಜಿಲ್ಲಾ ಹಾಪ್‌ಕಾಮ್ಸ್: ಸೆ.12ರಂದು ವಾರ್ಷಿಕ ಸಭೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ತೋಟದ ಉತ್ಪನ್ನಗಳ ಬೆಳೆಗಾರರ ಸಹಕಾರ ಮಾರಾಟ ಮತ್ತು ಸಂಸ್ಕರಣ ಸಂಘ (ಜಿಲ್ಲಾ ಹಾಪ್‌ಕಾಮ್ಸ್)ದ 2023-24ನೇ ಸಾಲಿನ ಸಂಘದ 39ನೇ ವಾರ್ಷಿಕ ಮಹಾಸಭೆ ಇದೇ ಸೆ.12ರಂದು ಬೆಳಿಗ್ಗೆ 11ಕ್ಕೆ ಚಿತ್ರದುಗ ನಗರದ ತುರುವನೂರು ರಸ್ತೆಯ ಸಂಘದ ಕಚೇರಿ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಹಾಪ್‌ಕಾಮ್ಸ್ ಅಧ್ಯಕ್ಷ ಕೆ.ಎಂ.ತಿಪ್ಪೇಸ್ವಾಮಿ ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಹಾಪ್‌ಕಾಮ್ಸ್ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

### ಸೆ.13 ರಂದು ಹಿರಿಯ ನಾಗರಿಕರ ಕ್ರೀಡಾ ಸ್ಪರ್ಧೆ



» ಚಿತ್ರದುರ್ಗ

ಅಕ್ಟೋಬರ್ 01 ರಂದು ಜರಗುವ ವಿಶ್ವ ಹಿರಿಯ ನಾಗರಿಕ ದಿನಾಚರಣೆ ಅಂಗವಾಗಿ ಸೆ.13 ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರದ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗಾಗಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. 60 ರಿಂದ 69 ಹಾಗೂ 70 ವರ್ಷ ಮೇಲ್ಪಟ್ಟವರು ಎಂಬ ಎರಡು ಗುಂಪುಗಳಲ್ಲಿ ಸ್ಪರ್ಧೆಗಳು ಜರುಗಲಿವೆ. ಕ್ರೀಡಾ ವಿಭಾಗದಲ್ಲಿ ಮ್ಯೂಜಿಕಲ್ ಚೇರ್, ಬಿರುಸಿನ ನಡಿಗೆ, ಬಕೆಟ್‌ನಲ್ಲಿ ಬಾಲ್ ಎಸೆಯುವ ಸ್ಪರ್ಧೆಗಳಿವೆ. ಸಾಂಸ್ಕೃತಿಕ ವಿಭಾಗದಲ್ಲಿ ಗಾಯನ ಹಾಗೂ ಏಕ ಪಾತ್ರಾಭಿನಯ ಸ್ಪರ್ಧೆಗಳಿವೆ. ಬೆಳಿಗ್ಗೆ 9.30 ರಿಂದಲೇ ಹೆಸರುಗಳನ್ನು ನೊಂದಾಯಿಸಿಕೊಳ್ಳಲಾಗವುದು. ಹೆಚ್ಚಿನ ಮಾಹಿತಿಗಾಗಿ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದ ಬಳಿಯ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಚೇರಿಗೆ ಭೇಟಿ ನೀಡಬಹುದು. ದೂರವಾಣಿ ಸಂಖ್ಯೆ 08194-235284ಗೆ ಕರೆ ಮಾಡಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸೆ.24 ರಂದು ದಿಶಾ ಸಮಿತಿ ಸಭೆ

» ದಾವಣಗೆರೆ

ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ ಇವರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 24 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ದಿಶಾ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ.ಬಿ.ಇಟ್ನಾಳ್ ತಿಳಿಸಿದ್ದಾರೆ.

### ಗೃಹಲಕ್ಷ್ಮೀ ಯೋಜನೆಗೆ ಹೆಲ್ಪ್‌ಡೆಸ್ಕ್

» ದಾವಣಗೆರೆ

ಗೃಹಲಕ್ಷ್ಮೀ ಯೋಜನೆಯಡಿ ನೊಂದಣಿಯಾಗಿ ಸಹಾಯಧನ ಪಾವತಿಯಾಗದೇ ಇರುವ ಫಲಾನುಭವಿಗಳಿಗೆ ಸೂಕ್ತ ಮಾಹಿತಿ ನೀಡಲು ತಾಲ್ಲೂಕುವಾರು ಶಿಶು ಅಭಿವೃದ್ಧಿ ಯೋಜನಾ ಕಚೇರಿಯಲ್ಲಿ ಹೆಲ್ಪ್ ಡೆಸ್ಕ್ ತೆರೆಯಲಾಗಿದೆ. ಇಲ್ಲಿಯವರೆಗೂಗೃಹಲಕ್ಷ್ಮೀಯೋಜನೆಗೆನೊಂದಣಿ ಮಾಡಿಕೊಳ್ಳದೇ ಇರುವ ಫಲಾನುಭವಿಗಳು ಗ್ರಾಮ ಒನ್, ದಾವಣಗೆರೆ ಒನ್, ಸೇವಾಸಿಂಧೂ ಕೇಂದ್ರಗಳಲ್ಲಿ ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಲಲಿತ.ಟಿ.ಎಸ್ ಪ್ರಥಮ ದರ್ಜೆ ಸಹಾಯಕರು ಮೊ.ಸಂ:9620380498, ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಎಂ.ಸಿ.ಸಿ.ಬಿ ಬ್ಲಾಕ್, ಕುವೆಂಪು ನಗರ ದಾವಣಗೆರೆ, ತುಷಾರ್. ಆರ್.ಎ ದ್ವಿತೀಯ ದರ್ಜೆ ಸಹಾಯಕರು ಮೊ.ಸಂ: 9380629266, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ದುರ್ಗಾಂಬಿಕ ಶಾಲೆ ಹತ್ತಿರ, ಸರಸ್ವತಿ ಬಡಾವಣೆ, ದಾವಣಗೆರೆ, ಕಿರಣ್ ತಾಲ್ಲೂಕು ಸಂಯೋಜನಾಧಿಕಾರಿ, ಪೋಷಣ್ ಅಭಿಯಾನ ಯೋಜನೆ ಮೊ.ಸಂ:9731262426, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ನೆಲಮಹಡಿ, ಪಿ.ಎಲ್.ಡಿ ಬ್ಯಾಂಕ್ ಬಿಲ್ಡಿಂಗ್. ಶಿವಮೊಗ್ಗ ರಸ್ತೆ, ಹರಿಹರ, ಈಶ್ವರ ತಾಲ್ಲೂಕು ಸಂಯೋಜನಾಧಿಕಾರಿ, ಪೋಷಣ್ ಅಭಿಯಾನ ಯೋಜನೆ ಮೊ.ಸಂ: 9740192819, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ತಾಲ್ಲೂಕು ಪಂಚಾಯಿತಿ ಆವರಣ, ಸ್ತ್ರೀಶಕ್ತಿ ಭವನ ಜಗಳೂರು. ಸುದೀಪ್ ತಾಲ್ಲೂಕು ಸಂಯೋಜನಾಧಿಕಾರಿ, ಪೋಷಣ್ ಅಭಿಯಾನ ಯೋಜನೆ ಮೊ.ಸಂ:9844019027, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಎರಡನೇ ಮಹಡಿ, ಮಲ್ಲಪ್ಪ ಕಾಂಪ್ಲೆಕ್ಸ್, ಟಿ.ಎಮ್ ರೋಡ್, ಹೊನ್ನಾಳಿ. ಶಿವಣ್ಣ ತಾಲ್ಲೂಕು ಸಂಯೋಜನಾಧಿಕಾರಿ, ಪೋಷಣ್ ಅಭಿಯಾನ ಯೋಜನೆ ಮೊ.ಸಂ:9686601791, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಶಿವಮೊಗ್ಗ ರಸ್ತೆ, ಐ.ಸಿ.ಐ.ಇ ಬ್ಯಾಂಕ್ ಹತ್ತಿರ, ಜಿ.ಎಂ ಕಾಂಪ್ಲೆಕ್ಸ್ ಚನ್ನಗಿರಿ ಸಂಪರ್ಕಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.

---

**ಜಿಲ್ಲೆಯಲ್ಲಿ 74 ಗ್ರಾಮಗಳು ಸಂಪೂರ್ಣ ಸಾಕ್ಷರತೆ, 2,89,033 ಅನಕ್ಷರಸ್ಥರಿಗೆ ಸಾಕ್ಷರತಾ ಪ್ರಮಾಣ ಪತ್ರ ವಿತರಣೆ: ಸುರೇಶ್ ಇಟ್ನಾಳ್**

# 58ನೇ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ


» ದಾವಣಗೆರೆ

ಜಿಲ್ಲೆಯ 74 ಗ್ರಾಮಗಳನ್ನು ಸಂಪೂರ್ಣ ಸಾಕ್ಷರತೆ ಹೊಂದಿರುವ ಗ್ರಾಮಗಳೆಂದು ಗುರುತಿಸಿದ್ದು ಜಿಲ್ಲೆ ಶೇ 85 ರಷ್ಟು ಸಾಕ್ಷರತಾ ಪ್ರಮಾಣ ಹೊಂದಿದ್ದು ಇದನ್ನು ಶೇ 100 ರಷ್ಟು ಸಾಧಿಸಲು ಎಲ್ಲರೂ ಶ್ರಮಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ.ಇಟ್ನಾಳ್ ತಿಳಿಸಿದರು.

ಅವರು ಬುಧವಾರ ಮಹಾನಗರ ಪಾಲಿಕೆಯ ಶಾಮನೂರು ಶಿವಶಂಕರಪ್ಪ ಸಭಾಂಗಣದಲ್ಲಿ ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಲೋಕ ಶಿಕ್ಷಣ ವಿಭಾಗ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ, ಡಯಟ್, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಸಾಕ್ಷರತಾ ಸಮಿತಿ, ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 58 ನೇ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ ಸಸಿಗೆ ನೀರು ಹಾಕುವ ಮೂಲಕ ಉದ್ಘಾಟನೆ ನೇರವೇರಿಸಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

1947 ರಲ್ಲಿ ನಮ್ಮ ದೇಶದ ಸಾಕ್ಷರತೆ ಪ್ರಮಾಣ ಶೇ 12 ರಷ್ಟಿತ್ತು, 1951 ರಲ್ಲಿ ನಡೆದ ಜನಗಣತಿಯಿಂದ ಈ ಪ್ರಮಾಣ ಶೇ 18 ರ ಸಾಕ್ಷರತಾ ಪ್ರಮಾಣವಿತ್ತು. 2011ರ ಜನಗಣತಿಯಲ್ಲಿ ರಾಜ್ಯದ ಸಾಕ್ಷರತಾ ಪ್ರಮಾಣ ಶೇ 75.36 ಇದ್ದು ಇದರಲ್ಲಿ ಪುರುಷರ ಸಾಕ್ಷರತಾ ಪ್ರಮಾಣ ಶೇ 82, ಮಹಿಳೆಯರು ಶೇ 68 ರಷ್ಟು ಸಾಕ್ಷರತೆ ಕಂಡು ಬಂದಿದೆ ಎಂದರು.

ಅಂದಾಜಿನ ಪ್ರಕಾರ 2024 ರಲ್ಲಿ ನಮ್ಮ



ಜಿಲ್ಲೆ ಶೇ 85.95 ಸಾಕ್ಷರತಾ ಪ್ರಮಾಣ ಹೊಂದಿದೆ ಎಂದು ಅಂದಾಜಿಸಲಾಗಿದೆ.

ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯುಮೆಂಟ್ ಅನ್ವಯ ಸರ್ಕಾರ ಒಂದು ಸಾವಿರ ಗ್ರಾಮ ಪಂಚಾಯಿತಿಗಳನ್ನು ಸಂಪೂರ್ಣ ಸಾಕ್ಷರತಾ ಗ್ರಾಮ ಪಂಚಾಯಿತಿ ಅಂಕಿ ಅಂಶದನ್ವಯ ಕಳೆದ ಆರ್ಥಿಕ ವರ್ಷದಲ್ಲಿ ಜಿಲ್ಲೆಯ 24 ಗ್ರಾಮ ಪಂಚಾಯಿತಿ ಒಳಗೊಂಡ 74 ಗ್ರಾಮಗಳನ್ನು ಸಂಪೂರ್ಣ ಸಾಕ್ಷರತಾ ಗ್ರಾಮಗಳೆಂದು ಘೋಷಣೆ ಮಾಡಲಾಗಿದೆ. ಜೊತೆಗೆ 280033 ಜನರನ್ನು ಕಲಿಕಾ ಕಾರ್ಯಕ್ರಮದ ಮೂಲಕ ಸಾಕ್ಷರರನ್ನಾಗಿ ಮಾಡಿ ಪ್ರಮಾಣ ಪತ್ರ ನೀಡಲಾಗಿದೆ.

ದಾವಣಗೆರೆ ಮಹಾನಗರ ಪಾಲಿಕೆಯ ಎಲ್ಲಾ ಪೌರಕಾರ್ಮಿಕರನ್ನು ಸಾಕ್ಷರರನ್ನಾಗಿಸಲು ನಿರ್ದೇಶನ ನೀಡಿದ್ದು. ಅವರು ಸಮೀಕ್ಷೆ ಕೈಗೊಂಡು ಪಾಲಿಕೆಯಲ್ಲಿ ಒಟ್ಟು 440 ಅನಕ್ಷರಸ್ಥರಿದ್ದು ಇವರನ್ನು ಸಾಕ್ಷರರನ್ನಾಗಿಸಲು 120 ಗಂಟೆಗಳ ಕಾಲ ಕಲಿಕೆ ಮತ್ತು 80 ಗಂಟೆಗಳ ಕಾಲ ಪ್ರಾಯೋಗಿಕ ತರಬೇತಿ ನೀಡುತ್ತಿದ್ದು ಮುಂದಿನ ಮೂರು ತಿಂಗಳ ಅವಧಿಯಲ್ಲಿ ತರಬೇತಿ ನೀಡಿ ಸಾಕ್ಷರತಾ ಪರೀಕ್ಷೆ ಮಾಡಲಾಗುತ್ತದೆ, ಈ ಪರೀಕ್ಷೆ ಪಾಸಾದವರಿಗೆ ಸಾಕ್ಷರಸ್ಥರು ಎಂದು ಘೋಷಣೆ ಮಾಡಿ ಪ್ರಮಾಣ ಪತ್ರ ನೀಡಲಾಗುತ್ತದೆ ಎಂದು ತಿಳಿಸಿದರು. ಮಹಾನಗರ ಪಾಲಿಕೆ ಪೌರಕಾರ್ಮಿಕರಾದ ನೀವು ಸಾಕ್ಷರಸ್ಥರಾಗಬೇಕು, ನಿಮ್ಮ ಸಾಕ್ಷರತಾ ಮಟ್ಟದ ಮೇಲೆ ನಿಮ್ಮ ಮಕ್ಕಳ ಸಾಕ್ಷರತೆ ಮಟ್ಟ ಹೆಚ್ಚುತ್ತದೆ. ಯಾರು ಅನಕ್ಷರಸ್ಥರು ಇದ್ದಾರೋ ಅವರ ಮಕ್ಕಳು ಶಾಲೆಯ ಶಿಕ್ಷಣದಲ್ಲಿ ಹಿಂದೆ ಉಳಿದಿದ್ದಾರೆ. ಆದ್ದರಿಂದ ಮಕ್ಕಳ ವಿದ್ಯಾಭ್ಯಾಸದಲ್ಲಿ ಶಿಕ್ಷಕರ ಪಾತ್ರ ಅಷ್ಟೇ ಅಲ್ಲದೆ ಪೋಷಕರ ಪಾತ್ರ ಕೂಡ ಬಹಳ ಮುಖ್ಯವಾಗಿದೆ. ನೀವು ಅಕ್ಷರಸ್ಥರಾಗಿ, ನಿಮ್ಮ ಮಕ್ಕಳನ್ನು ಅಕ್ಷರಸ್ಥರನ್ನಾಗಿಸಿ ತಮ್ಮ ಮಕ್ಕಳೂ ಉನ್ನತ ಸ್ಥಾನಗಳನ್ನು ಅಲಂಕರಿಸುವಂತಾಗಬೇಕು ಎಂದರು. ಈ ವರ್ಷ ಒಟ್ಟು 148 ಗ್ರಾಮ ಪಂಚಾಯಿತಿಗಳನ್ನುಸಂಪೂರ್ಣಸಾಕ್ಷರತೆಗೆ ಒಳಪಡಿಸಬೇಕೆಂಬ ಗುರಿ ಹೊಂದಿದ್ದೇವೆ. ಗ್ರಾಮ ಪಂಚಾಯತಿಯಲ್ಲಿಯೂ 259 ಸದಸ್ಯರು ಅನಕ್ಷರಸ್ಥರಿದ್ದಾರೆ, ಅವರಿಗೂ ಕಲಿಸುವ ಮೂಲಕ ತರಬೇತಿಯನ್ನು ನೀಡುತ್ತಿದ್ದೇವೆ ಎಂದು ತಿಳಿಸಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ ಮಾತನಾಡಿ ಕೇರಳದಲ್ಲಿ ನೂರು ಪ್ರತಿಶತ ಸಾಕ್ಷರತಾ ಪ್ರಮಾಣ ಇದೆ. ಅದೇ ರೀತಿ ನಮ್ಮ ಜಿಲ್ಲೆಯಲ್ಲೂ ಸಹ ಶೇ 100 ರಷ್ಟು ಸಾಕ್ಷರತೆ ಹೊಂದಲು ನೀವು ಸಾಕ್ಷರಸ್ಥರಾಗಿ, ನಿಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಿ ಎಂದರು.

ಸಾಕ್ಷರತಾ ಕಾರ್ಯಕ್ರಮದಲ್ಲಿ ಸೇವೆಗೈದ ಸಾಕ್ಷರ ಸೇನಾನಿಗಳಾದ ಹೆಗ್ಗೆರೆ ರಂಗಪ್ಪ, ಐರಣಿ ಚಂದ್ರು ಇವರಿಗೆ ಸನ್ಮಾನಿಸಲಾಯಿತು. ಸಾಕ್ಷರತಾ ಸಪ್ತಾಹದ ಅಂಗವಾಗಿ ಸುಂದರಮ್ಮ ರಾಜನಹಳ್ಳಿ ಲಕ್ಷ್ಮಣ ಶೆಟ್ಟಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಮಧು ಶಾ, ದ್ವಿತೀಯ ಸ್ಥಾನ ಸೌಮ್ಯ.ಎಸ್, ತೃತೀಯ ಸ್ಥಾನ ಪಡೆದ ವಿಜಯಲಕ್ಷ್ಮಿ .ಎಸ್ ಇವರಿಗೆ ಬಹುಮಾನ ನೀಡಲಾಯಿತು. ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆ ಸದಸ್ಯರಾದ ವಿ. ನಾಗರಾಜ್, ಪಾಲಿಕೆ ಆಯುಕ್ತೆ ರೇಣುಕಾ, ಡಯಟ್ ಪ್ರಾಂಶುಪಾಲರಾದ ಗೀತಾ ಎಸ್, ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ವಾಗಿಸ್ ಮಲ್ಲಿಕ್ ಒಡೆಯರ್, ಕೆಸಿ ಬಸವರಾಜ, ಗುರುಸಿದ್ಧ ಸ್ವಾಮಿ, ಸಾಕ್ಷರತಾ ಕಲಾತಂಡದ ಸಿಬ್ಬಂದಿಗಳು, ಮಹಾನಗರ ಪಾಲಿಕೆಯ ಪೌರಕಾರ್ಮಿಕರು, ಸಿಬ್ಬಂದಿಗಳು ಮತ್ತು ಇನ್ನಿತರರು ಉಪಸ್ಥಿತರಿದ್ದರು.

ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಮಹೇಶಪ್ಪ ಎಚ್ .ದೊಡ್ಮನಿ ಸ್ವಾಗತಿಸಿ ಸಾಕ್ಷರತೆಯ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ವಯಸ್ಕರ ಶಿಕ್ಷಣ ಇಲಾಖೆ ಸಹಾಯಕರಾದ ಪೂರ್ಣಿಮಾ ಜಿ ಸಾಕ್ಷರತಾ ಪ್ರತಿಜ್ಞಾವಿಧಿ ಬೋಧಿಸಿದರು.

---

# ಇಬ್ಬರು ನಕಲಿ ವೈದ್ಯರಿಗೆ ತಲಾ ಲಕ್ಷ ರೂ.ಗಳ ದಂಡ, ಮೆಡಿಕಲ್ ಸ್ಟೋರ್ ಮುಚ್ಚಲು ಆದೇಶ

» ದಾವಣಗೆರೆ

ಹೊನ್ನಾಳಿ ತಾಲ್ಲೂಕಿನ ಕ್ಯಾಸಿನಕೆರೆ ನಕಲಿ ವೈದ್ಯ ಹಾಗೂ ಲಿಂಗಾಪುರದಲ್ಲಿ ಫಾರ್ಮಾಸಿಸ್ಟ್ ನಡೆಸುತ್ತಿದ್ದ ಕ್ಲಿನಿಕ್ ಮುಚ್ಚಿಸಿ ತಲಾ ಲಕ್ಷ ರೂ.ಗಳ ದಂಡ ಪಾವತಿಸುವಂತೆ ಜಿಲ್ಲಾಧಿಕಾರಿ ಹಾಗೂ ಕೆಪಿಎಂಇ ನೊಂದಣಿ ಪ್ರಾಧಿಕಾರ ಹಾಗೂ ಸಾರ್ವಜನಿಕ ಕುಂದುಕೊರತೆ ನಿವಾರಣಾ ಸಮಿತಿ ಅಧ್ಯಕ್ಷರಾದ ಜಿ.ಎಂ.ಗಂಗಾಧರಸ್ವಾಮಿ ಆದೇಶಿಸಿದ್ದಾರೆ.

ಭದ್ರಾವತಿ ತಾಲ್ಲೂಕಿನ ಸನ್ಯಾಸಿಕೊಡಮಗ್ಗಿ ಗ್ರಾಮದ 57 ವರ್ಷದ ಶ್ರೀನಿವಾಸ್ ತಂದೆ ತಿಮ್ಮಪ್ಪ ಇವರು ಹೊನ್ನಾಳಿ ತಾಲ್ಲೂಕಿನ ಲಿಂಗಾಪುರದಲ್ಲಿ ಶೀನಪ್ಪಗೌಡ ಎಂಬುವರ ಮನೆ ಬಾಡಿಗೆ ಪಡೆದು ಹಲವು ವರ್ಷಗಳಿಂದ ಶ್ರೀ ರಾಮಾಂಜನೇಯ ಮೆಡಿಕಲ್ಸ್ ಮತ್ತು ಜನರಲ್ ಸ್ಟೋರ್ ಎಂದು ಪರವಾನಗಿ ಪಡೆದು ಜೊತೆಗೆ ಅನಧಿಕೃತವಾಗಿ ಕ್ಲಿನಿಕ್ ನಡೆಸುತ್ತಾ ಜನರಿಗೆ ಚಿಕಿತ್ಸೆ ನೀಡುತ್ತಿದ್ದನು. ಇವರು ಪಡೆದ ಮೆಡಿಕಲ್ ಸ್ಟೋರ್ ಲೈಸೆನ್ಸ್ ರದ್ದುಪಡಿಸಿ ಒಂದು ಲಕ್ಷ ದಂಡ ವಿಧಿಸಲಾಗಿದೆ. ಮತ್ತೊಬ್ಬ ನಕಲಿ ವೈದ್ಯ ಹಿರೇಕೇರೂರು ತಾಲ್ಲೂಕಿನ ಹಿರೇ ಮರಬ ಗ್ರಾಮದ 45 ವರ್ಷದ ಲಕ್ಷ್ಮಣ ಬಿನ್ ಫಕ್ಕೀರಪ್ಪ ಇವರು ಹೊನ್ನಾಳಿ ತಾಲ್ಲೂಕಿನ ಕ್ಯಾಸಿನಕೆರೆ ಗ್ರಾಮದಲ್ಲಿ ದೇವಸ್ಥಾನದ ಹತ್ತಿರ



ಬಸವನಗೌಡ ಎಂಬುವರಿಂದ ಮನೆ ಬಾಡಿಗೆ ಪಡೆದು ಹಲವು ವರ್ಷಗಳಿಂದ ಅನಧಿಕೃತ ಕ್ಲಿನಿಕ್ ನಡೆಸುತ್ತಾ ಬಂದಿದ್ದರು. ತಪಾಸಣೆ ವೇಳೆ ಬಿಇಎಂಎಸ್ ಪ್ರಮಾಣ ಪತ್ರ ಹೊಂದಲಾಗಿದೆ ಎಂಬ ಮಾಹಿತಿ ನೀಡಿದ್ದು ಇದು ಅಮಾನ್ಯ ಪ್ರಮಾಣ ಪತ್ರವಾಗಿರುವುದರಿಂದ ನಕಲಿ ಎಂದು ಪರಿಗಣಿಸಿ ಲಕ್ಷ ರೂ.ಗಳ ದಂಡ ವಿಧಿಸಲಾಗಿದೆ.

ಈ ನಕಲಿ ಕ್ಲಿನಿಕ್ ಗಳ ಬಗ್ಗೆ ಹೊನ್ನಾಳಿ ಉಪ ವಿಭಾಗಾಧಿಕಾರಿ ಅಭಿಷೇಕ್ ಮತ್ತು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಗಿರೀಶ್ ಸ್ಥಳ ಮಹಾಜರು ಮಾಡಿ ಸಮಗ್ರ ವರದಿ ನೀಡಿದ್ದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಹಾಗೂ ಕೆಪಿಎಂಇ ನೊಂದಣಿ ಸದಸ್ಯ ಕಾರ್ಯದರ್ಶಿ ಡಾ.ಷಣ್ಮುಖಪ್ಪ ಜಿಲ್ಲಾಧಿಕಾರಿಗಳಿಗೆ ಸಮಗ್ರ ವರದಿಯೊಂದಿಗೆ ಕ್ರಮಕ್ಕಾಗಿ ಪ್ರಸ್ತಾವನೆ ಸಲ್ಲಿಸಿದ್ದರು.

---

### ಘಟಪರ್ತಿ ಗೌರಮ್ಮ ಬಾಲಕಿಯರು ಖೋ-ಖೋದಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ



**ಚಳ್ಳಕೆರೆ:** ತಾಲ್ಲೂಕಿನ ತಳಕು ಹೋಬಳಿಯ ಘಟಪರ್ತಿ ಶ್ರೀಮತಿಗೌರಮ್ಮ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿನಿಯರು ಬಾಲಕಿಯರ ಖೋ-ಖೋ ವಿಭಾಗದಲ್ಲಿ ಜಿಲ್ಲಾ ಮಟ್ಟದಲ್ಲಿ ಗೆಲುವು ಸಾಧಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದು, ಪ್ರಾಂಶುಪಾಲ ತಿಪ್ಪೇಸ್ವಾಮಿ ವಿದ್ಯಾರ್ಥಿಗಳು ಹಾಗೂ ತರಬೇತಿದಾರ ಕೆ.ಟಿ.ವೇಲೂರುರವರನ್ನು ಅಭಿನಂದಿಸಿದರು. ಈ ಬಗ್ಗೆ ಪತ್ರಿಕೆಯೊಂದಿಗೆ ತಮ್ಮ ಸಂತಸ ಹಂಚಿಕೊಂಡ ಪ್ರಾಂಶುಪಾಲ ತಿಪ್ಪೇಸ್ವಾಮಿ, ಗ್ರಾಮೀಣ ಮಟ್ಟದಲ್ಲಿ ವಿದ್ಯಾರ್ಥಿಗಳಿಗೆ ವಿಶೇಷವಾಗಿ ಕ್ರೀಡಾಪಟುಗಳಿಗೆ ಉತ್ತಮ ತರಬೇತಿ ಹಾಗೂ ಉತ್ತೇಜನ ದೊರೆತಲ್ಲಿ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ತಮ್ಮ ಸಾಧನೆಯನ್ನು ಪ್ರದರ್ಶಿಸುವರು. ಗ್ರಾಮೀಣ ಭಾಗದ ಘಟಪರ್ತಿ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿನಿಯರು ಜಿಲ್ಲಾ ಮಟ್ಟದಲ್ಲಿ ಹೆಚ್ಚಿ ಸ್ಪರ್ಧೆ ನೀಡಿ ಅರ್ಹ ಗೆಲುವು ಸಾಧಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದು, ರಾಜ್ಯಮಟ್ಟದಲ್ಲೂ ಸಹ ಗೆಲುವು ದಾಖಲಿಸಿ ಚಳ್ಳಕೆರೆ ತಾಲ್ಲೂಕು ಹಾಗೂ ಜಿಲ್ಲೆಗೆ ಕೀರ್ತಿತರಲಿ ಎಂದು ಶುಭಹಾರೈಸುವುದಾಗಿ ತಿಳಿಸಿದರು. ತಂಡದಲ್ಲಿ ಮೋನಿಕಾ, ಕೆ.ಸುಶ್ಮಿತಾ, ವೈಷ್ಣವಿ, ಆರ್.ಸುಶ್ಮಿತಾ, ಸಿಂಧು, ಮಂತಮ್ಮ, ಸಿ.ಎಂ.ಪಲ್ಲವಿ, ಡಿ.ಭಾರತಿ, ಪವಿತ್ರ, ಪ್ರಿಯಾ ಉತ್ತಮ ಖೋ-ಖೋ ಆಟ ಪ್ರದರ್ಶಿಸಿದರು.

---

**ಪ್ರಮುಖ ಸುದ್ದಿ**

**ಶೀಘ್ರ ನ್ಯಾಯದಾನ, ರಾಜಿ, ಸಂಧಾನದ ಮೂಲಕ ಇತ್ಯರ್ಥಕ್ಕೆ 8272 ಪ್ರಕರಣಗಳ ಗುರಿ; ನ್ಯಾ.ರಾಜೇಶ್ವರಿ ಎನ್.ಹೆಗಡೆ**

# ಸೆ.14 ರಂದು ಮೂರನೇ ರಾಷ್ಟ್ರೀಯ ಲೋಕ್ ಅದಾಲತ್

» ದಾವಣಗೆರೆ

2024 ನೇ ಸಾಲಿನ ಮೂರನೇ ರಾಷ್ಟ್ರೀಯ ಲೋಕ್ ಅದಾಲತ್‌ನ್ನು ಸೆಪ್ಟೆಂಬರ್ 14 ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಹಮ್ಮಿಕೊಂಡಿದ್ದು ತ್ವರಿತ ನ್ಯಾಯ, ಕಡಿಮೆ ವೆಚ್ಚದಲ್ಲಿ ನ್ಯಾಯದಾನ ಮಾಡಲು ರಾಜಿ, ಸಂಧಾನದ ಮೂಲಕ ಪ್ರಕರಣಗಳ ಇತ್ಯರ್ಥಕ್ಕಾಗಿ 8272 ಕ್ಕಿಂತ ಹೆಚ್ಚು ಪ್ರಕರಣಗಳನ್ನು ಲೋಕ್ ಅದಾಲತ್ ಮೂಲಕ ಇತ್ಯರ್ಥ ಮಾಡುವ ಗುರಿ ಹೊಂದಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಎನ್.ಹೆಗಡೆ ತಿಳಿಸಿದರು.

ಅವರು ಬುಧವಾರ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಸೆಪ್ಟೆಂಬರ್ 14 ರಂದು ನಡೆಯಲಿರುವ ಮೂರನೇ ರಾಷ್ಟ್ರೀಯ ಲೋಕ್ ಅದಾಲತ್ ಕುರಿತಂತೆ ನಡೆಸಲಾದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಲೋಕ್ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಕಡಿಮೆ ಖರ್ಚಿನಲ್ಲಿ ಶೀಘ್ರವಾಗಿ ಬಗೆಹರಿಸಲು ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ. ಅದಾಲತ್‌ನಲ್ಲಿ ರಾಜಿಯಾಗಬಲ್ಲ ಎಲ್ಲಾ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಪರಿಹಾರ ಪ್ರಕರಣಗಳು,



ಚೆಕ್ ಅಮಾನ್ಯ ಪ್ರಕರಣಗಳು, ಭೂ ಸ್ವಾಧೀನ ಪರಿಹಾರ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ಗಣಿ ಮತ್ತು ಭೂ ವಿಜ್ಞಾನ ಕಾಯ್ದೆಗೆ ಸಂಬಂಧಿಸಿದ ಪ್ರಕರಣಗಳು, ಕೌಟುಂಬಿಕನ್ಯಾಯಾಲಯದ ಪ್ರಕರಣಗಳು ಇದರಲ್ಲಿ ವಿಚ್ಛೇದನ ಹೊರತುಪಡಿಸಿ, ಪಿಂಚಣಿ, ಚೇತನ ಭತ್ಯೆ, ವಿದ್ಯುತ್, ನೀರಿನ ಶುಲ್ಕ, ಕೈಗಾರಿಕಾ ಕಾರ್ಮಿಕರ ವೇತನ, ಕಾರ್ಮಿಕರ ವಿವಾದ, ಆಸ್ತಿ ತೆರಿಗೆ ಶೇ 5 ರಷ್ಟು ರಿಯಾಯಿತಿ ಸೇರಿದಂತೆ ಇನ್ನಿತರೆ ರಾಜಿಯಾಗಬಲ್ಲ ಪ್ರಕರಣಗಳಲ್ಲಿ ಲೋಕ್ ಅದಾಲತ್‌ನಲ್ಲಿ ಬಗೆಹರಿಸಿಕೊಳ್ಳಬಹುದಾಗಿದ್ದು ಇದರಿಂದ ಕಕ್ಷಿದಾರರು ಹಾಗೂ ಎದುರುದಾರರಿಗೂ ಅನುಕೂಲವಾಗಲಿದೆ ಎಂದರು.

ದಾವಣಗೆರೆ ಜಿಲ್ಲೆಯಲ್ಲಿ ಸೆಪ್ಟೆಂಬರ್ 9 ರವರೆಗೆ ಒಟ್ಟು 42523 ಪ್ರಕರಣಗಳು ಇತ್ಯರ್ಥಕ್ಕೆ ಬಾಕಿ ಇದ್ದು ಇದರಲ್ಲಿನ 8272 ಪ್ರಕರಣಗಳನ್ನು ಅದಾಲತ್‌ನಲ್ಲಿ ಇತ್ಯರ್ಥ ಮಾಡುವ ಗುರಿ ಹೊಂದಲಾಗಿದೆ. ಮತ್ತು ಈಗಾಗಲೇ ವಿವಿಧ ಬೈಠಕ್‌ಗಳ ಮೂಲಕ ರಾಜಿ, ಸಂಧಾನ ಮಾಡಿರುವ 3442 ಪ್ರಕರಣಗಳು ಮತ್ತು 63464 ವ್ಯಾಜ್ಯಪೂರ್ವ ಪ್ರಕರಣಗಳನ್ನು ಸೆಪ್ಟೆಂಬರ್ 14 ರಂದು ನಡೆಯುವ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಇತ್ಯರ್ಥ ಮಾಡಲು ಗುರಿ ಹೊಂದಲಾಗಿದೆ. ಈ ಹಿಂದೆ ನಡೆದ ಲೋಕ್ ಅದಾಲತ್‌ನಲ್ಲಿ 2023 ರ ಸೆಪ್ಟೆಂಬರ್ 9 ರಂದು 4224 ಬಾಕಿ ಪ್ರಕರಣಗಳು ಹಾಗೂ 99140 ವ್ಯಾಜ್ಯಪೂರ್ವ ಪ್ರಕರಣ, 2024 ರ ಮಾರ್ಚ್ 16 ರಂದು ನಡೆದ ಅದಾಲತ್‌ನಲ್ಲಿ 4568 ಬಾಕಿ ಪ್ರಕರಣಗಳು ಹಾಗೂ 144773 ವ್ಯಾಜ್ಯ ಪೂರ್ವ ಪ್ರಕರಣ, 2024 ರ ಜುಲೈ 13 ರಂದು ನಡೆದ ಲೋಕ್ ಅದಾಲತ್‌ನಲ್ಲಿ 7944 ಬಾಕಿ ಪ್ರಕರಣಗಳು ಮತ್ತು 255139 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥ ಮಾಡಿ ಜನರಿಗೆ ಅನುಕೂಲ ಕಲ್ಪಿಸಲಾಗಿದೆ. ಸೆಪ್ಟೆಂಬರ್ 14 ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಯಲಿದ್ದು ಈ ವೇಳೆ ವ್ಯಾಜ್ಯ ಮುಕ್ತ ಗ್ರಾಮಗಳೆಂದು ಘೋಷಣೆ ಮಾಡಲು ದಾವಣಗೆರೆ ತಾಲ್ಲೂಕಿನ ಬಾವಿಹಾಳ, ಓಬಣ್ಣನಹಳ್ಳಿ ಹಾಗೂ ಶ್ರೀ ರಂಗಯ್ಯನಮಟ್ಟಿ (ಗುಡ್ಡದಕ್ಯಾಪ್) ಗ್ರಾಮಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಅದೇ ರೀತಿ ಆಯಾ ತಾಲ್ಲೂಕಿನಲ್ಲಿ ವ್ಯಾಜ್ಯ ಮುಕ್ತ ಗ್ರಾಮಗಳನ್ನಾಗಿ ಆಯ್ಕೆ ಮಾಡಿ ಘೋಷಣೆ ಮಾಡಲಾಗುತ್ತದೆ ಎಂದರು.

ಲೋಕ್‌ಅದಾಲತ್‌ನಲ್ಲಿಸಾರ್ವಜನಿಕರು, ಕಕ್ಷಿದಾರರು ರಾಜಿ, ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥ ಮಾಡಿಕೊಳ್ಳಲು ಆಯಾ ತಾಲ್ಲೂಕಿನ ನ್ಯಾಯಾಲಯದಲ್ಲಿ ಭಾಗವಹಿಸಬಹುದಾಗಿದೆ. ಮತ್ತು ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ ಮೂಲಕ ಲಿಂಕ್ ನೀಡಲಿದ್ದು ವೀಡಿಯೋ ಕಾನ್ಫರೆನ್ಸ್ ಮೂಲಕವೂ ಅದಾಲತ್‌ನಲ್ಲಿ ಭಾಗಿಯಾಗಬಹುದಾಗಿದೆ ಎಂದರು.

ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ ಮಾತನಾಡಿ ಕಳೆದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ 18 ಪತಿ, ಪತ್ನಿಯರು ಒಂದಾಗಿದ್ದರು. ಈ ಭಾರಿಯು 17 ಪತಿ, ಪತ್ನಿಯರು ಒಂದಾಗಲು ಮುಂದಾಗಿದ್ದು ಈಗಾಗಲೇ ಎಲ್ಲಾ ತಾಲ್ಲೂಕು ನ್ಯಾಯಾಲಯಗಳಿಗೆ ಭೇಟಿ ನೀಡಿ ಬೈಠಕ್‌ಗಳನ್ನು ನಡೆಸುವ ಮೂಲಕ ಜಾಗೃತಿ ಮೂಡಿಸಲಾಗಿದ್ದು ಜಗಳೂರಿನಲ್ಲಿ ನಡೆದ ಬೈಠಕ್ ಒಂದರಲ್ಲಿ 35 ಪ್ರಕರಣಗಳನ್ನು ಒಂದೇ ದಿನ ರಾಜಿ, ಸಂಧಾನದ ಮೂಲಕ ಇತ್ಯರ್ಥ ಮಾಡಲಾಗಿದೆ ಎಂದರು.

ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಮಾತನಾಡಿ ರಾಷ್ಟ್ರೀಯ ಲೋಕ್ ಅದಾಲತ್‌ಗೆ ಬೇಕಾದ ಎಲ್ಲಾ ಸಹಕಾರವನ್ನು ಇಲಾಖೆ ನೀಡಲಿದ್ದು ಹೆಚ್ಚು ಜನರು ಇದರ ಅನುಕೂಲ ಪಡೆಯುವ ಮೂಲಕ ತ್ವರಿತ ನ್ಯಾಯದಾನ ಸಿಗಲಿದೆ ಎಂದರು.

## ಫಾಸ್ಟ್ ನ್ಯೂಸ್

### ಹೈನುಗಾರಿಕೆ, ಕುರಿ ಮತ್ತು ಮೇಕೆ, ಕೋಳಿ ಸಾಕಾಣಿಕೆ ತರಬೇತಿ

» ದಾವಣಗೆರೆ



ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ನಗರದ ಪಶು ಆಸ್ಪತ್ರೆ ಆವರಣದಲ್ಲಿರುವ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಸೆಪ್ಟೆಂಬರ್ 12, 13, ಮತ್ತು 25, 26 ರಂದು ಆಧುನಿಕ ಹೈನುಗಾರಿಕೆ ಸೆ. 17 ಮತ್ತು 18 ರಂದು ಕೋಳಿ ಸಾಕಾಣಿಕೆ, ಸೆ. 20 ಮತ್ತು 21 ರಂದು ಕುರಿ ಮೇಕೆ ಸಾಕಾಣಿಕೆ, ಹಾಗೂ ತರಬೇತಿಯನ್ನು ಆಯೋಜಿಸಲಾಗಿದೆ. ತರಬೇತಿಗೆ ಹಾಜರಾಗುವ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರ ಜೆರಾಕ್ಸ್ ತರಬೇಕು. ತರಬೇತಿಯಲ್ಲಿ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ ದಾವಣಗೆರೆ ದೂ. 08192–233787 ಗೆ ಸಂಪರ್ಕಿಸಬಹುದೆಂದು ಮುಖ್ಯ ಪಶು ವೈದ್ಯಾಧಿಕಾರಿಗಳು ತಿಳಿಸಿದ್ದಾರೆ

### ವ್ಯಕ್ತಿ ಕಾಣೆ

» ದಾವಣಗೆರೆ

ಕಕ್ಕರಗೊಳ್ಳ ಗ್ರಾಮದ ಮಂಜುನಾಥ ತಂದೆ ನಾಗೇಂದ್ರಚಾರ್ 36 ವರ್ಷ ಇವರು 2024 ರ ಫೆಬ್ರವರಿ 1 ರಿಂದ ಕಾಣೆಯಾಗಿರುತ್ತಾನೆ. ಇವರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಹದಡಿ ಪೊಲೀಸ್ ಠಾಣೆ ದೂ.ಸಂ. 08192–253100 ಪಿ.ಎಸ್.ಐ ಹದಡಿ ಪೊಲೀಸ್ ಠಾಣೆ 9480803254, 08192–218405 ಗೆ ಕರೆ ಮಾಡಿ ತಿಳಿಸಬಹುದಾಗಿದೆ.

### ವಯೋವೃದ್ದೆ ಕಾಣೆ

» ದಾವಣಗೆರೆ

ಕಾಡಜ್ಜಿ ಗ್ರಾಮದ ಪಾರ್ವತಮ್ಮ ಕೋಂ ಲೇಟ್ ಶರಣಪ್ಪ, 70 ವರ್ಷ, ಇವರು 2024 ರ ಜೂನ್ 17 ರಿಂದ ಕಾಣೆಯಾಗಿರುತ್ತಾನೆ. ಇವರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಹದಡಿ ಪೊಲೀಸ್ ಠಾಣೆ ದೂ.ಸಂ. 08192–253100 ಪಿ.ಎಸ್.ಐ ಹದಡಿ ಪೊಲೀಸ್ ಠಾಣೆ 9480803254, 08192–218405 ಗೆ ಕರೆ ಮಾಡಿ ತಿಳಿಸಬಹುದಾಗಿದೆ.

### ಮಹಿಳೆ ಕಾಣೆ

» ದಾವಣಗೆರೆ

ದಾವಣಗೆರೆ ತಾಲ್ಲೂಕು ಮುಡೇನಹಳ್ಳಿ ಗ್ರಾಮದ ಪವಿತ್ರ ಕೋಂ ಮೂಗಪ್ಪ, 30 ವರ್ಷ, ಇವರು 2024 ರ ಜೂನ್ 19 ರಿಂದ ಕಾಣೆಯಾಗಿರುತ್ತಾನೆ. ಇವರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಹದಡಿ ಪೊಲೀಸ್ ಠಾಣೆ ದೂ.ಸಂ. 08192–253100 ಪಿ.ಎಸ್.ಐ ಹದಡಿ ಪೊಲೀಸ್ ಠಾಣೆ 9480803254, 08192–218405 ಗೆ ಕರೆ ಮಾಡಿ ತಿಳಿಸಬಹುದಾಗಿದೆ.

### ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಡಾ.ಬಿ.ಆರ್. ಅಂಬೇಡ್ಕರ್ ನಿಗಮಗಳ ವ್ಯಾಪ್ತಿಗೆ ಬರುವ ಜನಾಂಗದ ಫಲಾನುಭವಿಗಳಿಗೆ ಸ್ವಯಂ ಉದ್ಯೋಗ ಯೋಜನೆ, ಐ.ಎಸ್.ಬಿ.ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಎಂ.ಸಿ.ಎಫ್ ಪ್ರೇರಣಾ ಯೋಜನೆ, ಗಂಗಾ ಕಲ್ಯಾಣ ಯೋಜನೆ ಮತ್ತು ಭೂ ಒಡೆತನ ಯೋಜನೆಯಡಿ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಹರು ಅಕ್ಟೋಬರ್ 10 ರೊಳಗಾಗಿ ಕರ್ನಾಟಕ ಒನ್, ಗ್ರಾಮ–1, ಸೇವಾಸಿಂಧುವಿನಲ್ಲಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರು, ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ, #337/16ಎ–16, ಗಣೇಶ ಲೇಔಟ್, 1ನೇ ಕ್ರಾಸ್ ಪಿ.ಬಿ.ರಸ್ತೆ ದಾವಣಗೆರೆ ಇಲ್ಲಿ ಸಂಪರ್ಕಿಸಲು ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

### ಉದ್ಯೋಗ ಮೇಳ

» ದಾವಣಗೆರೆ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಮಾದರಿ ವೃತ್ತಿ ಕೇಂದ್ರ, ದಾವಣಗೆರೆ ಇವರ ವತಿಯಿಂದ ಸೆ.13 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾಡಳಿತ ಭವನದ ಕೊಠಡಿ ಸಂಖ್ಯೆ 51 ರಲ್ಲಿ ಉದ್ಯೋಗಮೇಳ ಆಯೋಜಿಸಲಾಗಿದೆ. ಮೇಳದಲ್ಲಿ ಖಾಸಗಿ ಸಂಸ್ಥೆಗಳು ತಮ್ಮ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಪಿಯುಸಿ, ಪದವಿ ಮತ್ತು ಸ್ನಾತಕೋತ್ತರ ಪದವಿಯಲ್ಲಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಆಗಮಿಸುವ ಅಭ್ಯರ್ಥಿಗಳು ಕನಿಷ್ಠ 5 ಸೆಟ್ ಬಯೋಡಾಟಾ ಮತ್ತು ಆಧಾರ್ ನಂಬರ್ ನೊಂದಿಗೆ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ: 8105122556, 08192–259446 ಸಂಪರ್ಕಿಸಲು ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

## ಸತ್ಯ, ನೀತಿ, ಪ್ರೀತಿ, ಪ್ರಾಮಾಣಿಕತೆ, ಸಹಕಾರ, ಸೌಹಾರ್ದತೆ, ಅಹಿಂಸೆ

# ಇಂಥ ಜೀವನ ಮೌಲ್ಯ ಪ್ರತಿಯೊಬ್ಬರಿಗೂ ಬೇಕು

» ಸಾಣೇಹಳ್ಳಿ

ಧರ್ಮದ ಮೂಲ ಭಯ ಎನ್ನುವ ವಾತಾವರಣವನ್ನು ಸಂಪ್ರದಾಯಬದ್ಧ, ವೈದಿಕ ಪರಂಪರೆಯವರು ಜಾರಿಯಲ್ಲಿ ತಂದಿದ್ದರು. ಧರ್ಮದ ಹೆಸರಿನಲ್ಲಿ ಮಾಡುವ "ಹಿಂಸೆ ಹಿಂಸೆಯಲ್ಲ ಎನ್ನುವ ಭ್ರಮೆಯನ್ನು ಜನರ ಮನದಲ್ಲಿ ಬಿತ್ತಿ ತಮ್ಮ ಬೇಳೆ ಬೇಯಿಸಿಕೊಳ್ಳುತ್ತಿದ್ದರು. ಅವರು ಕಾನೂನನ್ನು ತಮ್ಮ ಕಪಿಮುಷ್ಠಿಯಲ್ಲಿ ಇಟ್ಟುಕೊಳ್ಳುವ ಪ್ರವೀಣರಾಗಿದ್ದರು. ಅಂಥ ಸಂದರ್ಭದಲ್ಲಿ ವಚನ ಸಂವಿಧಾನ ಹೇಳಿದ್ದು ಧರ್ಮದ ಮೂಲ ಭಯವಲ್ಲ; ದಯೆ ಎಂದು ಹೇಳಿದರು.

ತುಮಕೂರಿನ ಸಿದ್ದಗಂಗಾ ಮಠದಲ್ಲಿ ನಡೆದ ಮಠಾಧೀಶರಿಗೆ ವಚನ ಕಮ್ಮಟದಲ್ಲಿ ಸಾಣೇಹಳ್ಳಿಯ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳವರು *ಭಾರತ ಸಂವಿಧಾನ : ವಚನ ಸಂವಿಧಾನ* ಕುರಿತಂತೆ ಮಾತನಾಡಿ; ಸತ್ಯ, ನೀತಿ, ಪ್ರೀತಿ, ಪ್ರಾಮಾಣಿಕತೆ, ಸಹಕಾರ, ಸೌಹಾರ್ದತೆ, ಅಹಿಂಸೆ ಇಂಥ ಜೀವನ ಮೌಲ್ಯಗಳು ಪ್ರತಿಯೊಬ್ಬ ವ್ಯಕ್ತಿಗೂ ಬೇಕು.




ರೈತ ಬಂಡಿಯ ಗಾಲಿಗಳು ಅಚ್ಚಿನಿಂದ ಹೊರಹೋಗದಂತೆ ಕೀಲುಗಳನ್ನು ಹಾಕುವುದು ಬಹುಮುಖ್ಯ. ಅಷ್ಟೇ ಮುಖ್ಯವಾದುದು ಈ ಮನುಷ್ಯನ ಒಡಲೆಂಬ ಬಂಡಿಗೆ ಕೀಲುಗಳನ್ನು ಹಾಕುವುದು. ಹಾಗಿದ್ದರೆ ಮಾನವ ದೇಹವೆನ್ನುವ ಬಂಡಿಗೆ ಹಾಕಬೇಕಾದ ಕೀಲುಗಳು ಯಾವವು? ಅವೇ ಶಿವಶರಣರ ನುಡಿಮುತ್ತುಗಳು ಅರ್ಥಾತ್ ವಚನಗಳು. ಆ ವಚನಗಳ ಆಶಯದಂತೆ ಪ್ರತಿಯೊಬ್ಬ ವ್ಯಕ್ತಿಯೂ ನಡೆದುಕೊಂಡರೆ ಮಾನವ ಬದುಕಿನ ಬಂಡಿ ಯಾವುದೇ ಅಡೆತಡೆ ಇಲ್ಲದೆ ಮುಂದೆ ಸಾಗುವುದು. ಆದರ್ಶ ಜೀವನಕ್ಕೆ ಸೋಪಾನವಾಗುವುದು. ನೆಮ್ಮದಿಯ ಜೀವನಕ್ಕೆ ತಳಹದಿಯಾಗಿ ಕಲ್ಯಾಣ ರಾಜ್ಯ ನೆಲೆಗೊಳ್ಳುವುದು.

12ನೆಯ ಶತಮಾನದಲ್ಲಿ ಇಂದಿನ ಬಸವಕಲ್ಯಾಣದಲ್ಲಿ ಬಹುದೊಡ್ಡ ಚಳವಳಿ ನಡೆತು. ಆ ಚಳವಳಿಯ ಮೂಲ ಉದ್ದೇಶ ಧಾರ್ಮಿಕ ನೆಲೆಗಟ್ಟಿನ ಮೇಲೆ ಸಮಸಮಾಜವನ್ನು ಕಟ್ಟುವುದಾಗಿತ್ತು. ಅದಕ್ಕಾಗಿ ಬಸವಣ್ಣನವರು 'ಮಹಾಮನೆ', 'ಅನುಭವ ಮಂಟಪ' ಎನ್ನುವ ಸಂಸ್ಥೆಗಳನ್ನು ಹುಟ್ಟುಹಾಕಿದರು. ಆದರೆ ಸರಿಯಾದ ಅಧ್ಯಯನದ ಕೊರತೆ ಇರುವವರು ಅಥವಾ ವಚನ ಚಳವಳಿಯ ಬಗ್ಗೆ ಭಯಗೊಂಡ ಮತ್ಸರಿಗರು 'ಅನುಭವ ಮಂಟಪ, ಮಹಾಮನೆ ಇರಲೇ ಇಲ್ಲ. ವಚನಗಳು ಬರೆದದ್ದಲ್ಲ, ಸೃಷ್ಟಿಸಿದ್ದು. ಬಸವಾದಿ ಶರಣರು ಅಸಮಾನತೆಯ ವಿರುದ್ಧ ಚಳವಳಿಯನ್ನೇ ನಡೆಸಿಲ್ಲ. ಕಲ್ಯಾಣದಲ್ಲಿ ನಡೆದದ್ದು ಕ್ರಾಂತಿಯೇ ಅಲ್ಲ. ಭಾರತದಲ್ಲಿ ಕ್ರಾಂತಿ, ಚಳವಳಿಯ ಶಬ್ದಗಳಿಗೆ ಜಾಗವೇ ಇಲ್ಲ' ಎಂದೆಲ್ಲ ಅಂದಿನಿಂದ, ಇಂದಿನವರೆಗೆ, ಈಗಲೂ ಹರಟುತ್ತಲೇ ಇದ್ದಾರೆ. ತಮ್ಮ ವಾದವನ್ನು ಸಮರ್ಥಿಸಿಕೊಳ್ಳಲು ಬೇಕಾದ ಪುಸ್ತಕಗಳಬರೆಸುತ್ತಿದ್ದಾರೆ. ವಿವಿಧ ದೃಶ್ಯಮಾಧ್ಯಮಗಳ ಮೂಲಕ ಅಸತ್ಯವನ್ನೇ ಸತ್ಯಮಾಡಲು ಹೆಣಗುತ್ತಿದ್ದಾರೆ. ಅವರ ವಾದ, ಗೊಣಗಾಟ, ಮತ್ಸರ, ಕುಹಕತನ, ಅತೀಬುದ್ಧಿವಂತಿಕೆ ಅವರಿಗೇ ಇರಲಿ. ಅನುಭವ ಮಂಟಪ, ಮಹಾಮನೆ ಕಲ್ಪನೆಗಳಲ್ಲ. ವಚನಗಳು ಅಂದಿನ ಶರಣರ ಜೀವನಾನುಭವದ ಅಣಿಮುತ್ತುಗಳು. ಅಂಥ ವಚನಗಳು ಇದ್ದವು ಎನ್ನುವುದಕ್ಕೆ ಅಂದಿನಿಂದ ಇಂದಿನವರೆಗೂ ಅವು ಉಳಿದು ಬಂದಿರುವುದೇ ಪ್ರತ್ಯಕ್ಷ ಸಾಕ್ಷಿ. ಅಂದು ಕಲ್ಯಾಣದಲ್ಲಿ ಧಾರ್ಮಿಕ, ಸಾಹಿತ್ಯಕ, ಸಾಮಾಜಿಕ, ಆರ್ಥಿಕ, ಸಾಂಸ್ಕೃತಿಕ ಪರಿವರ್ತನೆಯ ಗಾಳಿ ಬೀಸಿತು ಎನ್ನುವುದನ್ನು ವಚನಗಳೇ ಗಟ್ಟಿಯಾಗಿ ಹೇಳುತ್ತವೆ. ಅನುಭವ ಮಂಟಪದಲ್ಲಿ ಶರಣರೆಲ್ಲ ಸೇರಿ ಪರಸ್ಪರ ಚಿಂತನ ಮಂಥನ ನಡೆಸುತ್ತಿದ್ದರು. ಅವರ ಚಿಂತನ ಮಂಥನದ ಉದ್ದೇಶ ಸುಸ್ಥಿರ ಸಮಾಜವನ್ನು ಕಟ್ಟುವುದಾಗಿತ್ತು. ಅದಕ್ಕಾಗಿ ಬೇಕಾದ ಆದರ್ಶ ರೀತಿ–ನೀತಿ–ನಿಯಮಗಳನ್ನು ರೂಪಿಸಿ ಜಾರಿಯಲ್ಲಿ ತರುವುದಾಗಿತ್ತು.

ಕರ್ನಾಟಕ ಸರ್ಕಾರ ಡಾ. ಎಂ ಎಂ ಕಲಬುರ್ಗಿಯವರ ಸಂಪಾದಕತ್ವದಲ್ಲಿ ಆ ಎಲ್ಲ ವಚನಗಳನ್ನು ಪ್ರಕಟಿಸಿ ಅವು ಎಲ್ಲ ಜನರ ಕೈಗೆ ಸಿಗುವಂತೆ ಮಾಡಿದೆ. ಅದಕ್ಕಾಗಿ ಸರ್ಕಾರ ಅಭಿನಂದನಾರ್ಹ. ಶರಣರ ವಚನಗಳು ಆರದ ಬೆಳಕಾಗಿ ನಮ್ಮನ್ನು ಕೈ ಹಿಡಿದು ಮುನ್ನಡೆಸುವ ಶಕ್ತಿ ಹೊಂದಿವೆ. ವಚನಗಳಲ್ಲಿ ಅಡಕವಾಗಿರುವ ಆದರ್ಶ ತತ್ವ ಸಿದ್ಧಾಂತಗಳು ಅಂದಿಗೆ ಮಾತ್ರ ಅಲ್ಲ; ಇಂದಿಗೂ, ಎಂದೆಂದಿಗೂ ಸಲ್ಲುವಂತಹುಗಳಾಗಿವೆ. 'ಅನುಭವ ಮಂಟಪ' ಇಂದಿನ 'ಸಂಸತ್' (ಪಾರ್ಲಿಮೆಂಟ್) ಇದ್ದಹಾಗೆ. ಅಂದಿನ ಏಳನೂರು ಎಪ್ಪತ್ತು ಅಮರ ಗಣಂಗಳು ಇಂದಿನ ಸಂಸತ್ ಸದಸ್ಯರಿದ್ದಂತೆ. ಲಕ್ಷದ ಮೇಲೆ ತೊಂಬತ್ತಾರು ಸಾವಿರ ಶರಣರು ಇದ್ದರೆಂದು ತಿಳಿದುಬರುತ್ತದೆ. ಅವರೇ ಅನುಭವ ಮಂಟಪದ ಅಮರ ಗಣಂಗಳನ್ನು ಆಯ್ಕೆ ಮಾಡುವ ಜವಾಬ್ದಾರಿಯುತ ಮತದಾರರು. ಅಂದು ಅನುಭವ ಮಂಟಪ ಎನ್ನುವ ಸಂಸತ್ತಿನಲ್ಲಿ ಪ್ರಜಾಪ್ರಭುತ್ವದ ಸಿದ್ಧಾಂತಗಳಾದ ಸ್ವಾತಂತ್ರ್ಯ, ಸಮಾನತೆ, ಸಹೋದರತ್ವ ಇತ್ಯಾದಿ ತತ್ವಗಳನ್ನು ಜಾರಿಯಲ್ಲಿ ತರಲಾಗಿತ್ತು.

ಇವತ್ತು ಸಂವಿಧಾನ ಎನ್ನುತ್ತಲೇ ನಮಗೆ ನೆನಪಾಗುವುದು ಡಾ. ಬಿ ಆರ್ ಅಂಬೇಡ್ಕರ್ ಅವರ ಅಧ್ಯಕ್ಷತೆಯಲ್ಲಿ ರಚನೆಯಾದ 'ಭಾರತ ಸಂವಿಧಾನ'. ಭಾರತ ಆಂಗ್ಲರ ಆಡಳಿತದಿಂದ ಸ್ವಾತಂತ್ರ್ಯ ಪಡೆದನಂತರ ತನ್ನ ಆಡಳಿತವನ್ನು ಸುಗಮವಾಗಿ ಮುನ್ನಡೆಸಲು ಬೇಕಾದ ನೀತಿ ನಿರೂಪಣೆ ಮಾಡಲು ಪ್ರಾಜ್ಞರ ಒಂದು ಸಮಿತಿಯನ್ನು ರಚಿಸಲಾಯಿತು. ಆ ಸಮಿತಿಯಲ್ಲಿ ವಿವಿಧ ಕ್ಷೇತ್ರದಲ್ಲಿ ಪರಿಣಿತರಾದ ಸ್ತ್ರೀ–ಪುರುಷರು ಸದಸ್ಯರಾಗಿದ್ದರು. ಅಂಥ ಜವಾಬ್ದಾರಿಯುತ ಸಮಿತಿಯ ಅಧ್ಯಕ್ಷತೆಯ ಹೊಣೆ ಹೊತ್ತು ಅದನ್ನು ಸಮರ್ಥವಾಗಿ ನಿಭಾಸಿದವರು ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರು. ಅವರೆಲ್ಲರೂ ಭಾರತಕ್ಕೆ ಬೇಕಾದ ಸಂವಿಧಾನ ರಚನೆ ಮಾಡುವ ಮುನ್ನ ವಿವಿಧ ದೇಶಗಳ ಸಂವಿಧಾನ ಮತ್ತು ಬೇರೆ ಬೇರೆ ಕಡೆ ನಡೆದ ಕ್ರಾಂತಿ, ಮಾನವ ಹಕ್ಕುಗಳ ಪರಿಯನ್ನು ಸಮಗ್ರವಾಗಿ ಅಧ್ಯಯನ ಮಾಡಿದರು. ಆ ಅಧ್ಯಯನದ ಫಲಶೃತಿಯನ್ನು ಲಿಖಿತರೂಪಕ್ಕೆ ಇಳಿಸಿ ಅದನ್ನೇ ಭಾರತದ ಸಂವಿಧಾನ ಎಂದು ಅಂಗೀಕರಿಸಿದರು. ಪ್ರಜಾಪ್ರಭುತ್ವ ದೇಶದ ಬಹುದೊಡ್ಡ ಸಂವಿಧಾನ ನಮ್ಮದೇ ಆಗಿದೆ. ಅದರಲ್ಲಿ ಕಲ್ಯಾಣ ನಾಡನ್ನು ಕಟ್ಟಲು ಬೇಕಾದ ನೀತಿ, ನಿಯಮ, ಕಾನೂನುಗಳು ಅಡಕವಾಗಿವೆ. ಮುಖ್ಯವಾಗಿ ರಾಜ್ಯಾಂಗ, ನ್ಯಾಯಾಂಗ, ಕಾರ್ಯಾಂಗ, ಹಕ್ಕು ಮತ್ತು ಕರ್ತವ್ಯಗಳ ವಿವರವಾದ ಮಾ"ತಿಯನ್ನು ಭಾರತದ ಸಂವಿಧಾನದಲ್ಲಿ ನೋಡಬಹುದು. ನಮ್ಮ ಸಂವಿಧಾನದ ಪೀಠಿಕೆಯೇ ಸಂವಿಧಾನದ ಮಹತ್ವ, ಅಗತ್ಯ ಮತ್ತು ಹಿರಿಮೆಯನ್ನು ಎತ್ತಿಹಿಡಿಯುವಂತಹುದಾಗಿದೆ.

ಯಾವ ಅಪರಾಧಕ್ಕೆ ಯಾವ ಶಿಕ್ಷೆ ಎಂದು ಸಂವಿಧಾನ, ಭಾರತೀಯ ದಂಡ ಸಂಹಿತೆ (ಇಂಡಿಯನ್ ಪೀನಲ್ ಕೋಡ್) ಹೇಳಿದರೆ ಅದಕ್ಕಿಂತ ಪರಿಣಾಮಕಾರಿಯಾಗಿ ಬಸವಣ್ಣನವರು ಈ ವಚನದಲ್ಲಿ ಹೇಳಿದ್ದಾರೆ. ಮನುಷ್ಯನ ಮೂಲ ಆಶಯ ದೇವರ ಒಲುಮೆ ಪಡೆಯಬೇಕು ಎನ್ನುವುದು. ಹಾಗೆ ಒಲುಮೆ ಪಡೆಯಲು ಬೇಕಾಗಿದ್ದು ಅಂತರಂಗ ಮತ್ತು ಬಹಿರಂಗ ಶುದ್ಧಿ. ಈ ಶುದ್ಧಿಗಾಗಿ ಕೆಲವರು ಸ್ನಾನ, ಧ್ಯಾನ ವಿಚಾರ ಹೇಳಬಹುದು. ಬಸವಣ್ಣನವರು ಅವುಗಳ ವಿಚಾರವನ್ನೇ ಇಲ್ಲಿ ಪ್ರಸ್ತಾಪಿಸಿಲ್ಲ. ಬದಲಾಗಿ ಏಳು ಶೀಲ ಅಂದರೆ ನಡಾವಳಿಕೆಗಳನ್ನು, ನೀತಿ ಸಂಹಿತೆಗಳನ್ನು ಹೇಳಿದ್ದಾರೆ. ದೇವರು ಒಲಿಯಬೇಕು ಎಂದರೆ ದೈಹಿಕ, ಮಾನಸಿಕ ಮತ್ತು ಬೌದ್ಧಿಕವಾಗಿಯೂ ಕಳವು, ಕೊಲೆ, ಸುಳ್ಳು ಇತ್ಯಾದಿ ನಡೆಯಬಾರದು. ಅಷ್ಟೇ ಅಲ್ಲ; ಇತರರ ಮೇಲೆ ವಿನಾಕಾರಣ ಸಿಟ್ಟಿಗೇಳುವುದು, ಅಸಹ್ಯಪಡುವುದು, ತನ್ನನ್ನೇ ಹೊಗಳಿಕೊಳ್ಳುವುದು, ಇತರರನ್ನು ನಿಂದಿಸುವುದು ಇಂತಹ ಪಾಪದ ಕಾರ್ಯಗಳಿಂದಲೂ ದೂರವಿರಬೇಕು ಎನ್ನುವ ಎಚ್ಚರಿಕೆಯನ್ನು ಧಾರ್ಮಿಕ, ನೈತಿಕ ನೆಲೆಯಲ್ಲಿ ವಚನಸಂವಿಧಾನ ನೀಡಿರುವುದು ಭಾರತೀಯ ಸಂವಿಧಾನದ ಘನತೆಯನ್ನು ನೂರುಪಟ್ಟು ಹೆಚ್ಚಿಸುವಂತಿದೆ.

ಪ್ರಜಾಪ್ರಭುತ್ವದಲ್ಲಿ ಪ್ರಜಾಪ್ರಭು ಮತ್ತು ಪ್ರಜಾಪ್ರತಿ ಇವರ ಜವಾಬ್ದಾರಿ ಏನೆಂದು ಭಾರತ ಸಂವಿಧಾನ ಹೇಳುತ್ತದೆ. ಅದಕ್ಕಿಂತ ಪರಿಣಾಮಕಾರಿಯಾಗಿ ವಚನ ಸಂವಿಧಾನ ಪ್ರತಿಪಾದಿಸುತ್ತದೆ. 'ನಡೆ ನುಡಿ ಸಿದ್ಧಾಂತವಾದಲ್ಲಿ ಕುಲ ಹೊಲೆ ಸೂತಕವಿಲ್ಲ' ಎನ್ನುವರು ಮಾದಾರ ಚನ್ನಯ್ಯನವರು. ಹಮ್ಮು, ಬಿಮ್ಮು ಬಿಟ್ಟು ಎಲ್ಲರೊಳಗೊಂದಾಗಿ ಬಾಳಬೇಕು ಎನ್ನುವರು.

ಪ್ರತಿಯೊಬ್ಬರ ಹುಟ್ಟಿನ ಗುಟ್ಟು ಒಂದೇ ಆಗಿರುವಾಗ ಯಾರು ಮೇಲ್ಜಾತಿ, ಯಾರು ಕೀಳ್ಜಾತಿ ಎಂದು ಕೇಳುವ ಬಸವಣ್ಣನವರು ಯಾರಾದರೂ ಕಿವಿಯಲ್ಲಿ ಹುಟ್ಟಿದ್ದುಂಟೇ ಎಂದು ಪ್ರಶ್ನಿಸುತ್ತಾರೆ ಎಂದರು. ಈ ಸಂದರ್ಭದಲ್ಲಿ ಸಿದ್ದಗಂಗೆಯ ಶ್ರೀ ಸಿದ್ದಲಿಂಗ ಸ್ವಾಮಿಗಳು, ಬಾಲ್ಕಿಯ ಹಿರೇಮಠದ ಬಸವಲಿಂಗ ಪಟ್ಟದ್ದೇವರು, ಗದಗಿನ ತೋಂಟದ ಸಿದ್ದರಾಮ ಸ್ವಾಮಿಗಳು, ಬೇಲಿಮಠದ ಶಿವರುದ್ರ ಸ್ವಾಮಿಗಳು, ಇಳಕಲ್ ನ ' ಮಹಾಂತ ಸ್ವಾಮಿಗಳು, ಮೋಟಗಿ ಮಠದ ಚೆನ್ನಬಸವ ಸ್ವಾಮಿಗಳು ಹಾಗೂ ಕರ್ನಾಟಕದ ಬೇರೆ ಬೇರೆ ಭಾಗಗಳಿಂದ ಸು 170 ಜನ ಸ್ವಾಮೀಜಿಗಳು ಶಿಬಿರಾರ್ಥಿಗಳಾಗಿ ಭಾಗವಹಿಸಿದ್ದರು.

# ಇಂಡಸ್ ವ್ಯಾಲಿ ಪಬ್ಲಿಕ್ ಶಾಲೆಯಲ್ಲಿ ವೇಷಭೂಷಣ ಸ್ಪರ್ಧೆ

» ಚಳ್ಳಕೆರೆ

ತ್ಯಾಗರಾಜನಗರದ ಇಂಡಸ್ ವ್ಯಾಲಿ ಪಬ್ಲಿಕ್ ಶಾಲೆಯಲ್ಲಿ ಕೃಷ್ಣಜಯಂತಿ ಹಿನ್ನೆಲೆಯಲ್ಲಿ ಶಾಲೆಯ ವಿದ್ಯಾರ್ಥಿಗಳಿಗೆ ರಾಧೆ, ಕೃಷ್ಣ ವೇಷಭೂಷಣ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಶಾಲೆಯ ವಿದ್ಯಾರ್ಥಿಗಳು ರಾಧೆ, ಕೃಷ್ಣನ ವೇಷದಲ್ಲಿ ಎಲ್ಲರ ಗಮನ ಸೆಳೆದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಚಂದ್ರಿಕಾಶ್ರೀನಿವಾಸ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಪುಟ್ಟಮಕ್ಕಳು ರಾಧೆ, ಕೃಷ್ಣನ ವೇಷದಲ್ಲಿ ಉತ್ತಮವಾಗಿ ಕಂಗೊಳಿಸುತ್ತಿದ್ದಾರೆ. ಕೃಷ್ಣ, ರಾಧೆಯರೇ ಧರೆಗೆ ಇಳಿದಂತೆ ಭಾಸವಾಗುತ್ತಿದೆ. ಮಕ್ಕಳಲ್ಲಿರುವ ಶಿಸ್ತು, ಸಂಯಮ ಹಾಗೂ ಅವರ ಮುಗ್ದತೆ ಮೆಚ್ಚುವಂತಹದ್ದು. ಇಂತಹ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುವಂತಾಗಬೇಕು ಎಂದರು.

ಶಾಲೆಯ ಕಾರ್ಯದರ್ಶಿ ಟಿ.ಚಿಕ್ಕಣ್ಣ ಮಾತನಾಡಿ, ಪ್ರತಿವರ್ಷ ನಮ್ಮ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ರಾಧೆ, ಕೃಷ್ಣವೇಷದ ಸ್ಪರ್ಧೆಯನ್ನು ಏರ್ಪಡಿಸಲಾಗುತ್ತಿದೆ. ಪುಟ್ಟಮಕ್ಕಳ ಜೊತೆಗೆ ತಾಯಂದಿರು ಉತ್ಸಾಹದಿಂದ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರೆ. ಪಠ್ಯೇತರ ಚಟುವಟಿಕೆಗಳನ್ನು ನಡೆಸುವ ಮೂಲಕ ವಿದ್ಯಾರ್ಥಿಗಳಿಗೆ ವಿವಿಧ ಆಯಾಮಗಳಲ್ಲಿ ಪ್ರೋತ್ಸಾಹ ನೀಡಲಾಗುತ್ತಿದೆ ಎಂದರು. ವಿಜೇತ ಮಕ್ಕಳಿಗೆ ಪ್ರಥಮ, ದ್ವಿತೀಯ ಬಹುಮಾನವನ್ನು ವಿತರಿಸಲಾಯಿತು.




## ಪ್ರಮುಖ ಸುದ್ದಿ

### ಪಂಪ್ ಹೌಸ್ ಸುತ್ತಮುತ್ತಲಿನ ಮನೆಗಳು ಸೇರಿದಂತೆ ಒಟ್ಟು 150 ಮನೆಗಳಲ್ಲಿ 'ಯಾರ್ಂಕಿಂಗ್ ಮೆಡಿಕಲ್ ಟೆಸ್ಟ್'

# ಕ್ಲೋರಿನ್ ಅನಿಲ ಸೋರಿಕೆ ಯಥಾಸ್ಥಿತಿಯತ್ತ ಹೊಸದುರ್ಗ

» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ: ಸೋಮವಾರ ಸಂಜೆ ಪಟ್ಟಣದ ಹುಳಿಯಾರು ರಸ್ತೆಯಲ್ಲಿರುವ ಪಂಪ್ ಹೌಸ್ ನಲ್ಲಿದ್ದ ಕ್ಲೋರಿನ್ ಅನಿಲ ಸೋರಿಕೆಯಾಗಿದ್ದ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಭಯದ ವಾತಾವರಣ ಮನೆಮಾಡಿತ್ತು. ತೀವ್ರ ಆತಂಕಕ್ಕೆ ಒಳಗಾಗಿದ್ದ ಪಂಪ್ ಹೌಸ್‌ನ ಸುತ್ತಮುತ್ತಲಿದ್ದ ಪಟ್ಟಣದ ಕಲ್ಲೇಶ್ವರ ಬಡಾವಣೆ, ಅಯ್ಯಪ್ಪ ಸ್ವಾಮಿ ಬಡಾವಣೆ, ಗೊರವಿನಕಲ್ಲು, ಕಪ್ಪಗೆರೆ ರಸ್ತೆಯಲ್ಲಿನ ಜನರು ಅಸ್ವಸ್ಥ ಗೊಂಡಿದ್ದರು. ತಲೆ ಸುತ್ತು, ಕೆಮ್ಮು, ಉಸಿರಾಟದ ಸಮಸ್ಯೆಯಿಂದ ಬಳಲುತ್ತಿದ್ದವರನ್ನು ಹೆಚ್ಚಿನ ಚಿಕಿತ್ಸೆಗಾಗಿ ದಾವಣಗೆರೆ, ಚಿತ್ರದುರ್ಗ ಹಾಗೂ ಶಿವಮೊಗ್ಗ ಆಸ್ಪತ್ರೆಗೆ ದಾಖಲಿಸಲಾಗಿತ್ತು ಪಟ್ಟಣದ ಆಸ್ಪತ್ರೆ ಮುಂಭಾಗದಲ್ಲಿ ನೂರಾರು ಜನರು ಜಮಾಯಿಸಿದ್ದು, ಆತಂಕದ ವಾತಾವರಣ ನಿರ್ಮಾಣವಾಗಿ ಇತಿಹಾಸದಲ್ಲೆ ಇಂತಹ ಘಟನೆ ನಡೆದೆ ಇರಲಿಲ್ಲ ಎಂಬ ಆತಂಕ ಸೃಷ್ಟಿಯಾಗತ್ತು ಆದರೆ ಈಗ ಪರುಸ್ಥಿತಿ ಯಥಾ ಸ್ಥಿತಿಗೆ ಬಂದಂತಾಗಿದೆ.



ಸದ್ಯ ಯಾವುದೇ ಸಾವು ನೋವು ಸಂಭವಿಸದೆ ಅಹಿತಕರ ಘಟನೆಗಳು ನಡೆದಿಲ್ಲ. ಅಧಿಕಾರಿಗಳು ಹಾಗೂ ವೈದ್ಯರ ಕಾಲ ಪ್ರಜ್ಞೆಯಿಂದ ಪಟ್ಟಣ ಯಥಾಸ್ಥಿತಿಯತ್ತ ಮರಳಿದೆ.

ಸೋಮವಾರ ರಾತ್ರಿ ಹೊಸದುರ್ಗ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿದ ಶಾಸಕ ಬಿ.ಜಿ. ಗೋವಿಂದಪ್ಪ ಹಾಗೂ ಜಿಲ್ಲಾಧಿಕಾರಿ ವೆಂಕಟೇಶ್ ಅವರು ರೋಗಿಗಳ ಯೋಗಕ್ಷೇಮ ವಿಚಾರಿಸಿ, ವೈದ್ಯರಿಂದ ಮಾಹಿತಿ ಪಡೆದರು. ಜನರು ಆತಂಕ ಪಡುವ ಅಗತ್ಯವಿಲ್ಲ, ಎಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ತಿಳಿಸಿದರು.

ಘಟನೆಯ ಬಗ್ಗೆ ಮಾತನಾಡಿದ ಪುರಸಭಾ ಸದಸ್ಯ ಕೆ.ಎಲ್.ನಾಗರಾಜ್ 7–8 ವರ್ಷಗಳ ಹಿಂದೆಯೇ ಇಲ್ಲಿ ಡೆಡ್ ಆಗಿತ್ತು. ನೀರು ಶುದ್ಧೀಕರಣದ ಚಟುವಟಿಕೆಗಳು ನಡೆಯುತ್ತಿರಲಿಲ್ಲ. ಸೋಮವಾರ ಸಂಜೆ ಏಕಾಏಕಿ ಇಲ್ಲಿ ಹೊಗೆ ಬಂದಿದೆ. ಸಾರ್ವಜನಿಕ ಕರೆ ಮೇರೆಗೆ ಸ್ಥಳಕ್ಕೆ ಬಂದಾಗ ಹೊಗೆ ಆವರಿಸಿತ್ತು. ಬೆಂಕಿ ಅವಘಡ ಸಂಭವಿಸಿರಬಹುದೆಂದು ಅಗ್ನಿಶಾಮಕ ದಳದವರನ್ನು ಕರೆಯಿಸಲಾಯಿತು. ಕ್ರಮೇಣ ಜನರು ಕಣ್ಣು ಉರಿ, ಉಸಿರಾಟದ ಸಮಸ್ಯೆ, ವಾಂತಿಯಂತಹ ಸಮಸ್ಯೆ ಎದುರಿಸಿದರು. ಕೂಡಲೇ ಪಂಪ್ ಹೌಸ್ ಗೆ ಧಾವಿಸಿ, ಸಿಲಿಂಡರ್ ನನ್ನು ಆಳವಾದ ಗುಂಡಿ ತೆಗೆದು ಮುಚ್ಚಿಸಲಾಯಿತು. ಮಂಗಳವಾರ ಬೆಳಿಗ್ಗೆ ತಜ್ಞರ ತಂಡ ಆಗಮಿಸಿ, ಕ್ಲೋರಿನ್ ಅನಿಲ ವಿಸರಣೆಯಾಗಿರುವುದರ ಬಗ್ಗೆ ಖಚಿತಪಡಿಸಿಕೊಂಡು. ಹೊರಗೆ ಹೊತ್ತೊಯ್ಯದರು ಎಂಬ ಮಾಹಿತಿ ನೀಡಿದರು.

ಸೋಮವಾರಸಂಜೆನಡೆದಅವಘಡದಲ್ಲಿ ಅಗ್ನಿಶಾಮಕ ದಳದ ಸಿಬ್ಬಂದಿಗಳು ಕ್ಲೋರಿನ್ ಅನಿಲ ಸೋರಿಕೆಯಾಗುವುದನ್ನು ತಡೆಗಟ್ಟಲು ಹರಸಾಹಸ ಪಡಬೇಕಾಯಿತು. ಸಿಲಿಂಡರ್‌ನ್ನು ಭೂಮಿಯಲ್ಲಿ ಗುಂಡಿ ತೆಗೆದು ಮುಚ್ಚುವ ಮೂಲಕ ಪರಿಸ್ಥಿತಿ ನಿಯಂತ್ರಿಸಿದರು. ಈ ವೇಳೆ ಇಬ್ಬರು ಸಿಬ್ಬಂದಿಗಳು ಸಹ ಅಸ್ವಸ್ಥರಾಗಿ ಆಸ್ಪತ್ರೆ ಸೇರಿದರು.

> ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪಂಪ್ ಹೌಸ್ ಗಳಲ್ಲಿ ಮತ್ತು ಶುದ್ಧೀಕರಣ ಘಟಕಗಳಲ್ಲಿ ಇರಬಹುದಾದ ಎಲ್ಲಾ ಘಟಕಗಳನ್ನು ಪರೀಕ್ಷಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಈ ರೀತಿಯ ಅವಘಡಗಳು ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಲಾಗಿದೆ
>
> » **ತಿಮ್ಮರಾಜು ಜಿ.ವಿ.ಮುಖ್ಯಾಧಿಕಾರಿ.ಪುರಸಭೆ**

> ಮಂಗಳವಾರ ಆರೋಗ್ಯ ಇಲಾಖೆ ಸಿಬ್ಬಂದಿಗಳು ಕ್ಲೋರಿನ್ ಅನಿಲ ಸೋರಿಕೆಯಾದ ಪಂಪ್ ಹೌಸ್ ಸುತ್ತಮುತ್ತಲಿನ ಮನೆಗಳು, ಕಲ್ಲೇಶ್ವರ ಬಡಾವಣೆಯ ಕೆಲ ಮನೆಗಳು ಸೇರಿದಂತೆ ಒಟ್ಟು 150 ಮನೆಗಳಲ್ಲಿ 'ಯಾರ್ಂಕಿಂಗ್ ಮೆಡಿಕಲ್ ಟೆಸ್ಟ್' ನಡೆಯಿಸಲಾಗಿದೆ. ಯಾವುದೇ ಉಸಿರಾಟದ ಸಮಸ್ಯೆ, ವಾಂತಿ, ತಲೆಸುತ್ತಿನಂತಹ ಪ್ರಕರಣಗಳು ಕಂಡುಬಂದಿಲ್ಲ. ಸಾರ್ವಜನಿಕ ಆಸ್ಪತ್ರೆಯಲ್ಲಿ ಅಧಿಕ ಜನರಿಗೆ ಪ್ರಥಮ ಚಿಕಿತ್ಸೆ ನೀಡಿ, ರಾತ್ರಿಯೇ ಮನೆಗೆ ಕಳುಹಿಸಲಾಗಿದೆ. ಹೆಚ್ಚಿನ ಚಿಕಿತ್ಸೆಗಾಗಿ ಚಿತ್ರದುರ್ಗ ಹಾಗೂ ದಾವಣಗೆರೆಗೆ ದಾಖಲಾಗಿದ್ದವರ ಆರೋಗ್ಯವೂ ಸುಧಾರಿಸಿದೆ. ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಆಗಿಲ್ಲ
>
> » **ಡಾ.ಜಿ. ಎಸ್. ರಾಘವೇಂದ್ರ ಪ್ರಸಾದ್ ತಾಲ್ಲೂಕು ಆರೋಗ್ಯಾಧಿಕಾರಿ**

ಕ್ಲೋರಿನ್ ಅನಿಲ 1 ರಿಂದ 2 ಕಿ.ಮೀ ಗೂ ಅಧಿಕ ದೂರ ವ್ಯಾಪಿಸಿದೆ ಹಿನ್ನೆಲೆಯಲ್ಲಿ ಉಸಿರುಗಟ್ಟಿದ ವಾತಾವರಣ ಎದುರಾಗಿ, ಸುತ್ತಲಿನ ಬಡಾವಣೆ ಜನರು ಉಸಿರಾಟದ ಸಮಸ್ಯೆ ಎದುರಿಸುವಂತಾಯಿತು. ಒಮ್ಮೆಲೆ ಅಧಿಕ ಜನರು ಆಸ್ಪತ್ರೆಗೆ ಸೇರಿದ ಹಿನ್ನೆಲೆಯಲ್ಲಿ ರೋಗಿಗಳು ದಟ್ಟಣೆ ಹೆಚ್ಚಾಯಿತು. 20 ಆಕ್ಸಿಜನ್ ಹಾಸಿಗೆ ಇರುವುದರಿಂದ ರೋಗಿಗಳಿಗೆ ಆಕ್ಸಿಜನ್ ನೀಡುವ ಮೂಲಕ ಚಿಕಿತ್ಸೆ ನೀಡಿದರು.

ರಸ್ತೆ ಪಕ್ಕದಲ್ಲಿನ ಪಂಪ್ ಹೌಸ್ ನಲ್ಲಿ ಉಪಯೋಗವಿಲ್ಲದ ಕೆ.ಹೆಚ್.ಬಿ. ಪಂಪ್ ಹೌಸ್ ನ ಆವರಣದಲ್ಲಿ ಬಿಸಾಡಿದ್ದ ಹಳೆಯ ಕ್ಲೋರಿನ್ ಸಿಲಿಂಡರ್ ನಿಂದ ಕ್ಲೋರಿನ್ ಅನಿಲ ಹೊಗೆ ರೂಪದಲ್ಲಿ ಏಕಾಏಕಿ ಹೊರಬಂದಿದೆ. ಅಕ್ಕ ಪಕ್ಕದ ಜನರಿಗೆ ಹಾಗೂ ರಸ್ತೆಯಲ್ಲಿ ಓಡಾಡುತ್ತಿದ್ದವರಿಗೆ ಕಣ್ಣು ಉರಿ, ಉಸಿರಾಟದ ಸಮಸ್ಯೆ ಉಂಟಾಗಿದೆ. ಕೂಡಲೇ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಒದಗಿಸಿ, ಸುರಕ್ಷಿತವಾಗಿ ಮನೆಗೆ ಕಳುಹಿಸಲಾಗಿದೆ. ಕ್ಲೋರಿನ್ ಅನಿಲ ಸಂಪೂರ್ಣ ಖಾಲಿಯಾಗಿದೆ. ಈ ಬಗ್ಗೆ ಆತಂಕ ಪಡುವ ಅಗತ್ಯವಿಲ್ಲ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T